# ಹಂಪಿ ಟೈಮ್ಸ್

HAMPI TIMES
KANNADA DAILY
ಕನ್ನಡ ದಿನಪತ್ರಿಕೆ

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA

epaper.hampitimes.com | e-mail: hampitimes@gmail.com | M:94486 33038 Reg.No.PMG/KA/NK/BLY/01/2024-2026

ಸಂಪುಟ:02 Volume:02 • ಸಂಚಿಕೆ: 292 Issue: 292 • ಪಿ.ಆರ್.ಜಿ.ಐ.ನಂ.:KARKAN/2023/88055 PRGI No:KARKAN/2023/88055 • ವಿಜಯನಗರ VIJAYANAGARA • 30.05.2025 30.05.2025 • ಶುಕ್ರವಾರ Friday • ಪುಟ:04 Page:04 • ಬೆಲೆ:2 Rs:2



HAMPI TIMES
PRINT & DIGITAL
Daily NEWS PAPER
To book Classified Display Ad in HAMPI TIMES Please call on
9448633038
Bring your product to local hearts




ಮನಸ್ಸು ಎಲ್ಲದಕ್ಕೂ ಮೂಲ,
ಅದನ್ನು ಸರಿಪಡಿಸಿಕೊಳ್ಳದ ಹೊರತು
ಇನ್ನಾವುದು ಸರಿಯಾಗದು
– ಡಿ.ವಿ.ಜಿ

## ದೇವಾಲಯ ದರ್ಶನ



ಹಂಪಿ ಶ್ರೀ ವಿರೂಪಾಕ್ಷೇಶ್ವರ ದರ್ಶನ

ನಿತ್ಯ ಅಭಿಷೇಕ ಸಮಯ
ಬೆಳಿಗ್ಗೆ: 6:30, 10:30 ಸಂಜೆ 6:30ಕ್ಕೆ

–: ದರ್ಶನ ಸಮಯ :–
ಬೆಳಿಗ್ಗೆ 6.30 ರಿಂದ ಮಧ್ಯಾಹ್ನ 1.15ರವರೆಗೆ
ಮಧ್ಯಾಹ್ನ 3 ರಿಂದ ರಾತ್ರಿ 7.30ರವರೆಗೆ

# ಶಿಕ್ಷಣ ಸ್ವಾಭಿಮಾನ ಬದುಕಿಗೆ ಬುನಾದಿ

## ಸಿಎಂ ಸಿದ್ದರಾಮಯ್ಯ ಹೇಳಿಕೆ | ಸರ್ಕಾರಿ ಶಾಲೆಗಳಲ್ಲೂ ಅತ್ಯುತ್ತಮ ಶಿಕ್ಷಣ ನಮ್ಮ ಗುರಿ

## ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಈ ಬಾರಿ 725 ಕೋಟಿ ಹಣ ಕೊಟ್ಟಿದ್ದೇವೆ ಎಂದ ಸಿ.ಎಂ






■ **ಹಂಪಿ ಟೈಮ್ಸ್ ಬೆಂಗಳೂರು**

ಪ್ರತಿಭೆ ಯಾರ ಸ್ವತ್ತೂ ಅಲ್ಲ. ಅವಕಾಶ ಸಿಕ್ಕರೆ ಎಲ್ಲರ ಪ್ರತಿಭೆಯೂ ಹೊರಗೆ ಬರುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನುಡಿದರು.

ಶಾಲಾ ಶೈಕ್ಷಣಿಕ ವರ್ಷದ ಪುನರಾರಂಭದ ಪ್ರಯುಕ್ತ ಆಡುಗೋಡಿಯ ಕರ್ನಾಟಕ ಸರ್ಕಾರಿ ಕನ್ನಡ ಶಾಲೆಯಲ್ಲಿ ಶಿಕ್ಷಣ ಇಲಾಖೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ, ಶಾಲಾ ಕೊಠಡಿ ಗಳ ಪರಿಶೀಲನೆ ನಡೆಸಿ ಬಳಿಕ ವೇದಿಕೆ ಕಾರ್ಯಕ್ರಮ ದಲ್ಲಿ ಮಾತನಾಡಿದರು.

ಸರ್ವರಿಗೂ ಶಿಕ್ಷಣ ಕೊಡುವುದು ಸರ್ಕಾರದ ಜವಾಬ್ದಾರಿ. ಶಿಕ್ಷಣ ಕೇವಲ ಜ್ಞಾನ ಕೊಡುವುದಿಲ್ಲ, ವ್ಯಕ್ತಿತ್ವವನ್ನು ರೂಪಿಸುತ್ತದೆ. ಪ್ರತಿಯೊಬ್ಬರೂ ಶಿಕ್ಷಣ ಪಡೆದುಕೊಳ್ಳಲೇಬೇಕು. ಇದರಿಂದ ಸ್ವಾಭಿಮಾನ ಬೆಳೆದು ಸಮಾಜದ ಆಸ್ತಿಯಾಗುತ್ತೇವೆ ಎಂದರು.

ಡಾ.ಬಾಬಾ ಸಾಹೇಬರು ದೇಶ ಕಂಡ ಮಹಾನ್ ವಿದ್ವಾಂಸರಲ್ಲಿ ಒಬ್ಬರು. ಬಿ.ಆರ್.ಅಂಬೇಡ್ಕರ್ ಅವರು ಕೊಟ್ಟಂತಹ ಸಂವಿಧಾನವನ್ನೂ ಎಲ್ಲರೂ ಪಾಲಿಸಬೇಕು. ಜಾತಿ, ವರ್ಗ ಮುಕ್ತ ಸಮ ಸಮಾಜ ನಿರ್ಮಾಣ ಆಗಬೇಕು ಎನ್ನುವುದು ಅಂಬೇಡ್ಕರ್ ಅವರ ಆಶಯವಾಗಿತ್ತು ಎಂದರು.

1992–93 ರಲ್ಲಿ ನಾನು ಹಣಕಾಸು ಮಂತ್ರಿಯಾಗಿದ್ದಾಗ ಒಂದು ಲಕ್ಷ ಶಿಕ್ಷಕರನ್ನು ನೇಮಕ ಮಾಡಲು ಹಣಕಾಸು ಅನುಮೋದನೆ ನೀಡಿದ್ದೆ ಎಂದು ಸ್ಮರಿಸಿದರು.

ಮಕ್ಕಳಿಗೆ ಉತ್ತಮ ಪೌಷ್ಠಿಕಾಂಶ ಸಿಕ್ಕರೆ ಮಾತ್ರ ಉತ್ತಮ ವಿದ್ಯಾರ್ಥಿಗಳಾಗಿ ಓದಲು ಸಾಧ್ಯ. ಈ ಕಾರಣಕ್ಕೇ ನಾವು ಮಕ್ಕಳಿಗೆ ಮೊಟ್ಟೆ, ಬಾಳೆಹಣ್ಣು, ಚಿಕ್ಕಿ, ಹಾಲು ಕೊಡುತ್ತಿದ್ದೇವೆ. ಇದರ ಜೊತೆಗೆ ಪಠ್ಯ, ಸಮವಸ್ತ್ರ, ಶೂ, ಸಾಕ್ಸ್, ಪುಸ್ತಕಗಳನ್ನೂ ಸರ್ಕಾರದಿಂದಲೇ ಕೊಡುತ್ತಿದ್ದೇವೆ ಎಂದರು.

**ಹೆಚ್ಚೆಚ್ಚು ಭಾಷೆ ಕಲಿಯಿರಿ:** ಕನ್ನಡದಲ್ಲಿ ಮುಂದಿರಿ ಮಕ್ಕಳು ಎಷ್ಟು ಭಾಷೆ ಕಲಿತರೂ ಒಳ್ಳೆಯದೆ. ಹೆಚ್ಚೆಚ್ಚು ಭಾಷೆ ಕಲಿತು ಕನ್ನಡದಲ್ಲಿ ಮುಂದಿರಿ. ಕನ್ನಡದಲ್ಲಿ ಕಲಿತರೆ ಮಕ್ಕಳು ಪ್ರತಿಭಾವಂತರಾಗುವುದಿಲ್ಲ ಎನ್ನುವುದು ತಪ್ಪು. ವೈಜ್ಞಾನಿಕ ಶಿಕ್ಷಣ ಪಡೆದು, ವೈಜ್ಞಾನಿಕ ಗುಣಮಟ್ಟ ಬೆಳೆಸಿಕೊಂಡರೆ ಮಕ್ಕಳು ಉತ್ತಮ ಪ್ರತಿಭಾವಂತರಾದಂತೆ. ಆದ್ದರಿಂದ ಸರ್ಕಾರಿ ಶಾಲೆಗಳ ಹಾಜರಾತಿ ಹೆಚ್ಚಾಗಬೇಕು ಎಂದು ಒತ್ತಿ ಹೇಳಿದರು.

ಶಾಲಾ ಕೊಠಡಿಗಳ ನಿರ್ಮಾಣಕ್ಕೆ ಈ ಬಾರಿಯೂ 725 ಕೋಟಿ ಹಣ ಕೊಟ್ಟಿದ್ದೇವೆ. ಕಳೆದ ವರ್ಷವೂ ಕೊಟ್ಟಿದ್ದೇವೆ. ಗುಣಮಟ್ಟದಲ್ಲಿ ಸರ್ಕಾರಿ ಶಾಲೆಗಳು ಹಿಂದುಳಿದಿಲ್ಲ ಎಂದರು.

ಗ್ರೇಸ್ ಮಾರ್ಕ್ಸ್ ಇಲ್ಲದೆ ಮಕ್ಕಳು ಉತ್ತಮ ಫಲಿತಾಂಶ ಪಡೆಯುವ ನಿಟ್ಟಿನಲ್ಲಿ ಶಿಕ್ಷಣ ಇಲಾಖೆ ಪ್ರಯತ್ನಿಸುತ್ತಿದೆ. ಎರಡನೇ ಮತ್ತು ಮೂರನೇ ಸಪ್ಲಿಮೆಂಟರಿ ಪರೀಕ್ಷೆಗಳಿಗೆ ಶುಲ್ಕ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಸಚಿವ ರಾಮಲಿಂಗಾರೆಡ್ಡಿಯವರ ಕ್ಷೇತ್ರದಲ್ಲಿ ಸರ್ಕಾರಿ ಶಾಲೆಗಳು ಉತ್ತಮ ಗುಣಮಟ್ಟ ಕಾಯ್ದುಕೊಂಡಿವೆ. ಇದೇ ಗುಣಮಟ್ಟ ಇಡೀ ರಾಜ್ಯಾದ್ಯಂತ ಆಗಬೇಕು ಎಂದು ಕರೆ ನೀಡಿದರು.

ಶಿಕ್ಷಣ ಸಚಿವ ಮಧುಬಂಗಾರಪ್ಪ, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಸೇರಿದಂತೆ ಇತರರು ಇದ್ದರು.

## ಮೈಕ್ರೋ ನ್ಯೂಸ್

### ಮೋಟಾರ್ ಬೈಕ್ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ




**ಹಂಪಿ ಟೈಮ್ಸ್ ಬಳ್ಳಾರಿ**
ಜಿಲ್ಲೆಯಲ್ಲಿ ಎಲ್ಲಾ ಮೋಟಾರ್ ಬೈಕ್ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ.ಶೋಭಾರಾಣಿ ವಿ.ಜೆ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಭಾರತೀಯ ಮೋಟಾರು ವಾಹನ ಕಾಯ್ದೆ 1989 ಹಾಗೂ ರ್‍ನಾಟಕ ಮೋಟಾರ್ ವಾಹನ ನಿಯಮ ಪ್ರಕಾರ ಪ್ರತಿಯೊಬ್ಬ ಮೋಟಾರ್ ಸೈಕಲ್ ವಾಹನ ಸವಾರ (Rider) ಹಾಗೂ ಹಿಂಬದಿ ಸವಾರನು (Pillion Rider) ತಮ್ಮ ಸುರಕ್ಷತೆಗಾಗಿ ಹೆಲ್ಮೆಟ್ ಧರಿಸುವುದು ಕಡ್ಡಾಯವಾಗಿದೆ. ಜಿಲ್ಲೆಯಲ್ಲಿ ಇತ್ತೀಚೆಗೆ ರಸ್ತೆ ಅಪಘಾತಗಳಲ್ಲಿ ತಲೆಗೆ ತೀವ್ರಗಾಯಗಳಾಗಿ ಸಾವಿಗೀಡಾಗಿರುತ್ತಿರುವುದು ಕಂಡುಬರುತ್ತಿದ್ದು, ಹಾಗಾಗಿ ಪ್ರತಿಯೊಬ್ಬ ಸಾರ್ವಜನಿಕರು ವಾಹನ ಚಲಾಯಿಸುವಾಗ ಸವಾರ ಮತ್ತು ಹಿಂಬದಿ ಸವಾರ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು.

ವಾಹನ ಚಲಾಯಿಸುವ ತಮ್ಮ ಕುಟುಂಬದ ಎಲ್ಲಾ ಸದಸ್ಯರು, ಶಾಲಾ–ಕಾಲೇಜು ವಿದ್ಯಾರ್ಥಿ ವಿದ್ಯಾರ್ಥಿನಿಯರು ಕಡ್ಡಾಯವಾಗಿ ಐ.ಎಸ್.ಐ ಮಾರ್ಕ್ ಹೊಂದಿದ ಹೆಲ್ಮೆಟ್‌ನ್ನು ಧರಿಸಿ, ರಸ್ತೆ ಸುರಕ್ಷತಾ ಕ್ರಮಗಳನ್ನು ಕಟ್ಟು ನಿಟ್ಟಾಗಿ ಅನುಸರಿಸಬೇಕು. ಜಿಲ್ಲೆಯ ಎಲ್ಲಾ ಸಾರ್ವಜನಿಕ ರಸ್ತೆಯಲ್ಲಿ ಪೊಲೀಸ್ ಇಲಾಖೆಯಿಂದ ವಿಶೇಷ ಕಾರ್ಯಾಚರಣೆ ಕೈಗೊಳ್ಳಲಾಗುತ್ತಿದ್ದು, ನಿಯಮ ಉಲ್ಲಂಘಿಸುವವರ ವಿರುದ್ಧ ಕಾನೂನಿನನ್ವಯ ಪ್ರಕರಣ ದಾಖಲಿಸಿ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ

## ಆನಂದ ಬಾಣ




# ಮೇ 31ರಂದು ಕವಿವಿ ಸಿಬ್ಬಂದಿ ಸೇವಾ ನಿವೃತ್ತಿ–ಸನ್ಮಾನ



■ **ಹಂಪಿ ಟೈಮ್ಸ್ ಹೊಸಪೇಟೆ**

ಹಸ್ತಪ್ರತಿಶಾಸ್ತ್ರ ಹಾಗೂ ಸಂಗೀತ ಮತ್ತು ನೃತ್ಯ ವಿಭಾಗ ಸಹಯೋಗದಲ್ಲಿ ಮೇ 31ರಂದು ಸೇವಾ ನಿವೃತ್ತಿ ಹೊಂದುತ್ತಿರುವ ಭಾಷಾಂತರ ಅಧ್ಯಯನ ವಿಭಾಗದ ಹಿರಿಯ ಪ್ರಾಧ್ಯಾಪಕರಾದ ಡಾ.ಎ.ಮೋಹನ ಕುಂಟಾರ್, ಬುಡಕಟ್ಟು ಅಧ್ಯಯನ ವಿಭಾಗದ ಹಿರಿಯ ಪ್ರಾಧ್ಯಾಪಕ ಡಾ.ಚಲುವರಾಜು ಹಾಗೂ ಆಡಳಿತಾಂದ ಉಪಕುಲಸಚಿವ ಡಾ.ಎ. ವೆಂಕಟೇಶ ಮತ್ತು ಕಳೆದ ಏಪ್ರಿಲ್‌ನಲ್ಲಿ ಸೇವಾ ನಿವೃತ್ತರಾದ ಜವಾನ ಗೌಳಿ ನಾಗರಾಜ ಇವರಿಗೆ ಹಸ್ತಪ್ರತಿಶಾಸ್ತ್ರ ವಿಭಾಗದಲ್ಲಿ ಗುರುವಾರ ಬೀಳ್ಕೊಡುಗೆ ಸಮಾರಂಭದಲ್ಲಿ ಸನ್ಮಾನಿಸಿ ಅವರ ಕೊಡುಗೆ ನೆನೆಲಾಯಿತು.

ಹಸ್ತಪ್ರತಿಶಾಸ್ತ್ರ ಹಾಗೂ ಸಂಗೀತ ಮತ್ತು ನೃತ್ಯ ವಿಭಾಗದ ಮುಖ್ಯಸ್ಥ ಡಾ.ವೀರೇಶ ಬಡಿಗೇರ ಮಾತನಾಡಿ, ಸೇವಾ ನಿವೃತ್ತಿ ಹೊಂದುತ್ತಿರುವ ಇವರೆಲ್ಲರೂ ಕನ್ನಡ ವಿಶ್ವವಿದ್ಯಾಲಯದ ಪ್ರಗತಿಗೆ ಬೇರುಮಟ್ಟದಿಂದ ಕೊಡುಗೆ ನೀಡಿದ್ದಾರೆ ಎಂದರು.

ಕನ್ನಡ ವಿಶ್ವವಿದ್ಯಾಲಯದ ಕುಲಸಚಿವ ಡಾ.ವಿಜಯ್ ಪೂಣಚ್ಚ ತಂಬಂಡ ಅಧ್ಯಕ್ಷತೆ ವಹಿಸಿ ಮಾತನಾಡಿ, ಕನ್ನಡ ವಿವಿಯ ತಜ್ಞ ಪ್ರಾಧ್ಯಾಪಕರ ಸೇವಾ ವಯೋ ನಿವೃತ್ತಿ ಸಹಜವಾದರೂ, ನಿವೃತ್ತಿಯಾಗುತ್ತಿರುವ ಸಂಖ್ಯೆ ಹೆಚ್ಚುತ್ತಿದ್ದು, ವಿವಿಯ ಸಂಪನ್ಮೂಲ ವ್ಯಕ್ತಿಗಳ ಸಂಖ್ಯಾಬಲ ಕುಗ್ಗುತ್ತಿದ್ದು, ನಿವೃತ್ತಗೊಂಡವರ ಕೊಡುಗೆ ಅಪಾರ ಎಂದು ಸ್ಮರಿಸಿದರು.

ಭಾಷಾ ನಿಕಾಯದ ಡೀನ್ ಡಾ.ಎಫ್.ಟಿ. ಹಳ್ಳಿಕೇರಿ, ಮಾಹಿತಿಕೇಂದ್ರದ ಉಪನಿರ್ದೇಶಕಿ ಡಾ.ಡಿ. ಮೀನಾಕ್ಷಿ ಇತರರು ಉಪಸ್ಥಿತರಿದ್ದರು. ಸಂಶೋಧನಾ ವಿದ್ಯಾರ್ಥಿ ಗಳಾದ ಎಂ.ಮಲ್ಲಿಕಾರ್ಜುನ, ಗೋಣಿಬಸಪ್ಪ, ನಿಶಾ ಕಾರ್ಯಕ್ರಮ ನಿರ್ವಹಿಸಿದರು.

# ರೈಲ್ವೆ ಮೇಲ್ಸೇತುವೆ ನಿರ್ಮಾಣಕ್ಕೆ ಭೂಮಿಪೂಜೆ

## ಹೊಸಪೇಟೆ–ಶಿವಮೊಗ್ಗ ಚತುಷ್ಪಥ ಹೆದ್ದಾರಿಗೆ ಪ್ರಸ್ತಾವನೆ : ಸಂಸದ ಈ.ತುಕಾರಾಂ ಹೇಳಿಕೆ



■ **ಹಂಪಿಟೈಮ್ಸ್ ಹಗರಿಬೊಮ್ಮನಹಳ್ಳಿ**

ಹೊಸಪೇಟೆ–ಶಿವಮೊಗ್ಗ ಮಾರ್ಗದ ರಸ್ತೆಯನ್ನು ಚತುಷ್ಪಥ ಹೆದ್ದಾರಿ ನಿರ್ಮಾಣಕ್ಕಾಗಿ ಕೇಂದ್ರ ಸರ್ಕಾರಕ್ಕೆ 1350 ಕೋಟಿ ರೂ.ಗಳ ಪ್ರಸ್ತಾವನೆ ಸಲ್ಲಿಸಲಾಗಿದೆ ಹಾಗೂ ಶೀಘ್ರದಲ್ಲೇ ಅನುಮೋದನೆ ಸಿಗುವ ಭರವಸೆ ಇದೆ ಎಂದು ಸಂಸದ ಈ.ತುಕಾರಾಂ ಹೇಳಿದರು.

ಪಟ್ಟಣದ ಹೊರ ವಲಯದ ಬ್ಯಾಲಾಳು ಕೆರೆ ಬಳಿ ಇರುವ ರೈಲ್ವೇ ಗೇಟ್ 35ರ ಮೇಲ್ಸೇತುವೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು. ಚತುಷ್ಪಥ ಹೆದ್ದಾರಿ ಪ್ರಸ್ತಾವನೆ ಈಗಾಗಲೇ ಪ್ರಧಾನಮಂತ್ರಿಯವರ ಕಛೇರಿಗೂ ತಲುಪಿದ್ದು ಆದಷ್ಟು ಬೇಗ ಅನುಮೋದನೆ ಸಿಗುವ ವಿಶ್ವಾಸವಿದೆ. ಇದರಿಂದ ಕರಾವಳಿ ಹಾಗೂ ಮಲೆನಾಡು ಭಾಗಗಳಿಂದ ವಿಜಯನಗರ ಜಿಲ್ಲೆಯ ವಿಶ್ವವಿಖ್ಯಾತ ಹಂಪಿಗೆ ಬರುವ ಪ್ರವಾಸಿಗರು ಮತ್ತು ಸಂಚರಿಸುವ ಜನರಿಗೆ ಚತುಷ್ಪಥ ಹೆದ್ದಾರಿಯ ಅಗತ್ಯವಿದೆ. ಅಷ್ಟೇ ಅಲ್ಲದೇ ಈ ಭಾಗದ ಪ್ರದೇಶಗಳ ಅಭಿವೃದ್ಧಿಯ ಜೊತೆಗೆ ಇಲ್ಲಿನ ಜನರಿಗೆ ಉದ್ಯೋಗಾವಕಾಶದ ದೃಷ್ಟಿಯಿಂದಲೂ ಅನುಕೂಲವಾಗಲಿದೆ ಎಂದರು.

75 ಕೋಟಿ ರೂ ವೆಚ್ಚದಲ್ಲಿ ಎರಡು ರೈಲ್ವೇ ಮೇಲ್ಸೇತುವೆಗಳನ್ನು ನಿರ್ಮಾಣ ಮಾಡಲಾಗುವುದು. ಪಟ್ಟಣದ ರಾಮನಗರದಲ್ಲಿರುವ ರೈಲ್ವೇ ಗೇಟ್ ನಂ.37ರ ಮೇಲೆ 40ಕೋಟಿ ರೂ. ವಚ್ಚದಲ್ಲಿ ಮೇಲ್ಸೇತುವೆ ನಿರ್ಮಾಣದ ಕಾಮಗಾರಿಗೆ ಆಗಸ್ಟ್ ತಿಂಗಳಲ್ಲಿ ಭೂಮಿಪೂಜೆ ನೆರವೇರಿಸುತ್ತೇವೆ. ಹೊಸಪೇಟೆ–ಬೆಂಗಳೂರು ಮತ್ತು ಹೊಸಪೇಟೆ–ಹುಬ್ಬಳಿಗೆ ಎರಡು ಹೊಸ ಪ್ಯಾಸೆಂಜರ್ ರೈಲುಗಳನ್ನು ಬಿಡುವ ಬಗ್ಗೆ ಮುಂದಿನ ದಿನಗಳಲ್ಲಿ ಪ್ರಯತ್ನಿಸುವೆ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕ್ಷೇತ್ರದ ಶಾಸಕ ಕೆ.ನೇಮಿರಾಜ ನಾಯ್ಕ, ಜೆಡಿಎಸ್ ತಾಲೂಕಾಧ್ಯಕ್ಷ ವೈ.ಮಲ್ಲಿಕಾರ್ಜುನ, ಪುರಸಭೆ ಅಧ್ಯಕ್ಷ ಎಂ.ಮರಿರಾಮಪ್ಪ, ಸದಸ್ಯರಾದ ಪವಾಡಿ ಹನುಮಂತಪ್ಪ, ನಾಗರಾಜ ಜನ್ನು, ಕಮಲಮ್ಮ, ಜಿ.ಸರಸ್ವತಿ, ದೀಪಕ್ ಕಠಾರೆ, ರೈತ ಸೇವಾ ಸಹಕಾರ ಬ್ಯಾಂಕ್‌ನ ಅಧ್ಯಕ್ಷ ದಾದಮ್ಮನವರ ಬಸವರಾಜ, ಮುಖಂಡರಾದ ಕುರಿ ಶಿವಮೂರ್ತಿ, ಮಾಜಿ ಜಿ.ಪಂ ಸದಸ್ಯ ಅಕ್ಕಿ ತೋಟೇಶ, ಕನ್ನಿಹಳ್ಳಿ ಚಂದ್ರಶೇಖರ, ಚಿತ್ತವಾಡ್ಗಿ ಪ್ರಕಾಶ, ಹೋಟೆಲ್ ಸಿದ್ಧರಾಜ, ಸಂದೀಪ್ ಶಿವಮೊಗ್ಗ, ಸೋಮನಾಥ, ತಹಶೀಲ್ದಾರ್ ಆರ್.ಕವಿತಾ, ಪುರಸಭೆ ಮುಖ್ಯಾಧಿಕಾರಿ ಪ್ರಭಾಕರ್ ಪಾಟೀಲ್, ಸಿಪಿಐ ವಿಕಾಸ ಲಮಾಣಿ, ಪಿಎಸ್‌ಐ ಬಸವರಾಜ ಅಡವಿಬಾವಿ ಸೇರಿದಂತೆ ಇತರರಿದ್ದರು.

# ವಿಜಯನಗರದಲ್ಲಿ ಶೇ.86 ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ ಪೂರ್ಣ

## ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಹೇಳಿಕೆ | ವಲಸೆ ಹೋದ, ಇನ್ನುಳಿದ ಪರಿಶಿಷ್ಟ ಜಾತಿ ಕುಟುಂಬಗಳ ಮಾಹಿತಿ ನೀಡಿ

■ **ಹಂಪಿ ಟೈಮ್ಸ್ ಹೊಸಪೇಟೆ**

ಜಿಲ್ಲೆಯಲ್ಲಿ ಈಗಾಗಲೇ ನಡೆಯುತ್ತಿರುವ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆಯಲ್ಲಿ ಆಯಾ ನಗರ, ತಾಲೂಕು ಮತ್ತು ಗ್ರಾಮಗಳಿಂದ ಕೆಲಸಕ್ಕಾಗಿ ಬೇರೆಡೆ ವಲಸೆ ಹೋಗಿರುವ ಪರಿಶಿಷ್ಟ ಕುಟುಂಬ ಗಳ ಮಾಹಿತಿಯನ್ನು ಒದಗಿಸುವಂತೆ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣ ದಲ್ಲಿ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ ಕುರಿತಂತೆ ಸಮುದಾಯದ ಮುಖಂಡರು, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳೊಂದಿಗೆ ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆವಹಿಸಿ ಗುರುವಾರ ಮಾತನಾಡಿದರು, ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನ್ ದಾಸ್ ಏಕಸದಸ್ಯ ವಿಚಾರಣಾ ಆಯೋಗ ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆಯಲ್ಲಿ ಜಿಲ್ಲಾ ವ್ಯಾಪ್ತಿಯಲ್ಲಿ ಕೆಲವೆಡೆ ಉದ್ಯೋಗಕ್ಕಾಗಿ ಬೇರೆಡೆ ವಲಸೆ ಮತ್ತು ಇನ್ನಿತರ ಕಾರಣಗಳಿಂದ ಹೋಗಿರುವ ಕುಟುಂಬಗಳನ್ನು ಹೊರತುಪಡಿಸಿ ಶೇ.86 ರಷ್ಟು ಸರ್ವೇ ಕಾರ್ಯ ಮುಗಿದ್ದಿದ್ದು. ಇನ್ನೂ ಶೇ.14 ರಷ್ಟು ಮಾತ್ರ ಸಮೀಕ್ಷೆ ಬಾಕಿ ಇದೆ. ಜಿಲ್ಲೆಯಲ್ಲಿ 2011 ಜನಗಣತಿ ಪ್ರಕಾರ ಪರಿಶಿಷ್ಟ ಜಾತಿ ಜನಾಂಗದವರು 3,24,306 ಸಂಖ್ಯೆಯಲ್ಲಿ ಇದ್ದು. ಇದರ ಅನ್ವಯ ಜಿಲ್ಲೆಯಲ್ಲಿ 2025 ಕ್ಕೆ ಸುಮಾರು 3,95,866 ಅಂದಾಜಿಸಲಾಗಿದೆ. ಈವರೆಗೆ 3,39,549 ಪರಿಶಿಷ್ಟ ಜಾತಿ ಜನಾಂಗದವರನ್ನು ಸರ್ವೇ ಮಾಡಲಾಗಿದೆ. ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆಯಲ್ಲಿ ಮತಗಟ್ಟೆ ಪ್ರದೇಶವಾರು ವಿಶೇಷ ಶಿಬಿರದಲ್ಲಿ ಮೇ 30 ರಿಂದ ಜೂ. 1ರ ವರಗೆ ಮತ್ತು ಆನ್‌ಲೈನ್ ಮೂಲಕ ಸ್ವಯಂ ಘೋಷಣೆಗೆ ಜೂ.1 ರ ವರಗೆ ನೋಂದಾಯಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಇದನ್ನು ಹೊರತುಪಡಿಸಿ ಜಿಲ್ಲೆಯಲ್ಲಿರುವ ವಲಸಿಗರು ಆದಷ್ಟು ಬೇಗ ಸಮೀಕ್ಷೆಯಲ್ಲಿ ಸ್ವಯಂಧೃಡೀಕರಿಸಿಕೊಳ್ಳಬೇಕು. ಸಮುದಾಯದ ಮುಖಂಡರು ಸಹಕರಿಸಬೇಕು. ಒಂದು ವೇಳೆ ವಲಸಿಗರು ಬರಲು ಸಾಧ್ಯವಾಗದಿದ್ದಲ್ಲಿ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಅಗತ್ಯ ದಾಖಲೆಗಳನ್ನು ಒದಗಿಸಬೇಕೆಂದು ತಿಳಿಸಿದರು.



ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ, ವಸತಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ನವೀನ್ ರಾಜ್‌ಸಿಂಗ್, ಜಿಪಂ ಸಿಇಒ ನೋಂಗ್ಜಾಯ್ ಮೋಹಮ್ಮದ್ ಅಕ್ರಮ್ ಅಲಿ ಷಾ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಹೆಚ್.ವಿ.ಮಂಜುನಾಥ ಸೇರಿದಂತೆ ಪರಿಶಿಷ್ಟ ಜಾತಿಗಳ ವಿವಿಧ ಸಮುದಾಯದ ಮುಖಂಡರು, ಇತರರು ಉಪಸ್ಥಿತರಿದ್ದರು.

ಹಂಪಿ ಟೈಮ್ಸ್ ಸಂ|ಪಾ|ದ|ಕೀ|ಯ

## ಶಾಲೆಗಳು ಆರಂಭ ಹೊಸ ಆಶಾದಾಯಕ ಹೆಜ್ಜೆ



ಬೇಸಿಗೆ ರಜೆಯ ಸಡಗರ ಮುಗಿದು, ನಾಡಿನಾದ್ಯಂತ ಶಾಲೆಗಳು ಪುನರಾರಂಭ ಗೊಂಡಿವೆ. ಮಕ್ಕಳ ನಗು, ಕಲರವದಿಂದ ಶಾಲಾ ಆವರಣಗಳು ಮತ್ತೆ ಜೀವಂತವಾಗಿವೆ. ಇದು ಕೇವಲ ಶೈಕ್ಷಣಿಕ ವರ್ಷದ ಆರಂಭವಲ್ಲ, ಬದಲಾಗಿ ಮಕ್ಕಳ ಭವಿಷ್ಯಕ್ಕೆ ಹೊಸ ಆಯಾಮ ನೀಡುವ, ಹೊಸ ಕನಸುಗಳನ್ನು ಬಿತ್ತುವ ಮತ್ತು ಹೊಸ ಜ್ಞಾನದ ಬಾಗಿಲು ತೆರೆಯುವ ಒಂದು ಮಹತ್ವದ ದಿನ.

ಸುದೀರ್ಘ ರಜೆಯ ನಂತರ ಮಕ್ಕಳು ಮತ್ತೆ ಶಾಲೆಯತ್ತ ಮುಖ ಮಾಡಿರುವುದು, ಹೊಸ ಪಾಠಗಳನ್ನು ಕಲಿಯಲು, ಹೊಸ ಸ್ನೇಹಿತರನ್ನು ಭೇಟಿ ಮಾಡಲು ಮತ್ತು ತಮ್ಮ ಶಿಕ್ಷಕರೊಂದಿಗೆ ಮತ್ತೆ ಬೆರೆಯಲು ಉತ್ಸುಕರಾಗಿದ್ದಾರೆ ಎಂಬುದನ್ನು ತೋರಿಸುತ್ತದೆ. ಶಾಲೆ ಎನ್ನುವುದು ಕೇವಲ ಪಾಠ ಹೇಳಿಕೊಡುವ ಸ್ಥಳವಲ್ಲ, ಅದು ಮಕ್ಕಳ ವ್ಯಕ್ತಿತ್ವವನ್ನು ರೂಪಿಸುವ, ಸಾಮಾಜಿಕ ಕೌಶಲ್ಯಗಳನ್ನು ಬೆಳೆಸುವ ಮತ್ತು ಭವಿಷ್ಯದ ನಾಗರಿಕರನ್ನು ಸಿದ್ಧಪಡಿಸುವ ತಪೋಭೂಮಿ. ಇಲ್ಲಿ ಅವರು ಶಿಸ್ತು, ಸಹಬಾಳ್ವೆ, ನಾಯಕತ್ವ ಮತ್ತು ಸವಾಲುಗಳನ್ನು ಎದುರಿಸುವ ಕೌಶಲ್ಯಗಳನ್ನು ಕಲಿಯುತ್ತಾರೆ.

ಈ ಹೊಸ ಶೈಕ್ಷಣಿಕ ವರ್ಷದಲ್ಲಿ, ಶಿಕ್ಷಕರು ಮತ್ತು ಪೋಷಕರು ಮಕ್ಕಳ ಶೈಕ್ಷಣಿಕ ಪ್ರಗತಿಯ ಜೊತೆಗೆ ಅವರ ಮಾನಸಿಕ ಮತ್ತು ಭಾವನಾತ್ಮಕ ಬೆಳವಣಿಗೆಗೂ ಒತ್ತು ನೀಡಬೇಕು. ಕೋವಿಡ್ ನಂತರದ ಸನ್ನಿವೇಶದಲ್ಲಿ, ಮಕ್ಕಳಲ್ಲಿ ಉಂಟಾಗಿರಬಹುದಾದ ಕಲಿಕೆಯ ಕೊರತೆಗಳನ್ನು ನೀಗಿಸಲು ವಿಶೇಷ ಗಮನ ಹರಿಸಬೇಕು. ತಂತ್ರಜ್ಞಾನದ ಸದ್ಬಳಕೆ, ಸೃಜನಾತ್ಮಕ ಕಲಿಕಾ ವಿಧಾನಗಳು ಮತ್ತು ಮಕ್ಕಳ ಆಸಕ್ತಿಗಳಿಗೆ ಪೂರಕವಾದ ಚಟುವಟಿಕೆಗಳನ್ನು ಅಳವಡಿಸಿಕೊಳ್ಳುವುದು ಅತ್ಯಗತ್ಯ.

ಸರ್ಕಾರವೂ ಸಹ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಸುಸಜ್ಜಿತ ಶಾಲಾ ಕಟ್ಟಡಗಳು, ಉತ್ತಮ ಮೂಲಸೌಕರ್ಯಗಳು, ಅರ್ಹ ಮತ್ತು ಸಮರ್ಪಕ ಸಂಖ್ಯೆಯ ಶಿಕ್ಷಕರು, ಹಾಗೂ ಆಧುನಿಕ ಕಲಿಕಾ ಸಾಮಗ್ರಿಗಳನ್ನು ಒದಗಿಸುವುದು ಇಂದಿನ ಅಗತ್ಯವಾಗಿದೆ. ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುವುದು ಮತ್ತು ಎಲ್ಲ ಮಕ್ಕಳಿಗೂ ಸಮಾನ ಅವಕಾಶಗಳನ್ನು ಕಲ್ಪಿಸುವುದು ಜನಪ್ರತಿನಿಧಿಗಳು ಸೇರಿದಂತೆ ಎಲ್ಲರ ಆದ್ಯತೆಯಾಗಬೇಕು.

ಮಕ್ಕಳು ನಮ್ಮ ದೇಶದ ಭವಿಷ್ಯದ ಆಧಾರ ಸ್ತಂಭಗಳು. ಅವರ ಸಮಗ್ರ ವಿಕಾಸ ನಮ್ಮೆಲ್ಲರ ಸಾಮೂಹಿಕ ಜವಾಬ್ದಾರಿ. ಶಾಲೆಗಳ ಪುನರಾರಂಭದ ಈ ಶುಭ ದಿನದಂದು, ಪ್ರತಿಯೊಬ್ಬ ವಿದ್ಯಾರ್ಥಿಗೂ ಉತ್ತಮ ಭವಿಷ್ಯ ಸಿಗಲಿ ಎಂದು ಹಾರೈಸೋಣ. ಈ ವರ್ಷವು ಕಲಿಕೆ, ಜ್ಞಾನ ಮತ್ತು ಯಶಸ್ಸಿನ ಹೊಸ ಅಧ್ಯಾಯವನ್ನು ತೆರೆಯಲಿ.





## ನಿಮ್ಮ ಬೆಂಬಲವೇ ನಮ್ಮ ಬಲ

ಸ್ಥಳೀಯ ಪತ್ರಿಕೆಗಳು ತಮ್ಮ ಕಾರ್ಯ ನೈಪುಣ್ಯತೆ ಮತ್ತಷ್ಟು ಅಭಿವೃದ್ಧಿಪಡಿಸಲು ಓದುಗರೂ ಸಹ ಚಂದಾದಾರಿಕೆ, ಸ್ವಯಂಪ್ರೇರಿತವಾಗಿ ಜಾಹೀರಾತು ನೀಡಿ ಬೆಂಬಲಿಸಿ, ಇತರರಿಗೂ ಪರಿಚಯಿಸಿ. ಮಕ್ಕಳ ಶೈಕ್ಷಣಿಕ ಪ್ರಗತಿಯೇ ನಮ್ಮ ಧ್ಯೇಯ. ನಿಮ್ಮ ಸಹಕಾರ ಮತ್ತಷ್ಟು ಉತ್ತಮ ಕಾರ್ಯಗಳಿಗೆ ಸ್ಫೂರ್ತಿ. ಸಸಿಗೆ ನೀರೆರೆಯದಿದ್ದರೆ ಹೂವು ನಿರೀಕ್ಷಿಸಲಾಗದು ಹಾಗೆಯೇ ಪತ್ರಿಕೆಗೆ ಬೆಂಬಲವಿಲ್ಲದೆ ಸೇವೆಯ ನಿರಂತರತೆ ಕನಸು ಕಾಣಲಾಗದು! ಪ್ರತಿ ಸುದ್ದಿಯ ಹಿಂದೆ ಯೋಗ್ಯ ಶ್ರಮವಿದೆ. ಪತ್ರಿಕೆ ಕೊಂಡು ಓದಿ, ಆ ಶ್ರಮವನ್ನು ಗೌರವಿಸಿ!

ಹಂಪಿ ಟೈಮ್ಸ್, ಹೊಸಪೇಟೆ



## ನೀವೂ ಬರೆಯಬಹುದು

ಹಂಪಿ ಟೈಮ್ಸ್ ಪತ್ರಿಕೆ ಆರಂಭಿಸಿದ್ದು ನಾವಾದರೂ, ಕೈಹಿಡಿದು ನಡೆಸುವವರು ನೀವು. ನಮ್ಮ ಇಚ್ಛೆಯೂ ಒಳಗೊಂಡಂತೆ ನಿಮ್ಮ ಆಶಯಗಳಿಗೆ ತಕ್ಕಂತೆ ಪತ್ರಿಕೆಯನ್ನು ರೂಪಿಸುವ ಹೊಣೆಗಾರಿಕೆ, ಜವಾಬ್ದಾರಿಯೂ ನಮ್ಮದಾಗಿದೆ. ಇಲ್ಲಿ ಕೇವಲ ನಮ್ಮ ಬರವಣಿಗೆ ಅಷ್ಟೇ ಅಲ್ಲದೇ, ಬರಹಗಾರರಾಗಿದ್ದರೆ ನೀವೂ ಕೂಡ ನಿಮ್ಮ ಬರಹವನ್ನಿಲ್ಲಿ ಓದಬಹುದು. ಈ ನಿಟ್ಟಿನಲ್ಲಿ ನಿಮ್ಮಿಂದ ಕತೆ, ಕವನ, ವಿವಿಧ ಪ್ರಕಾರದ ಸಾಹಿತ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಪರ ಚಿಂತನೆ ಒಳಗೊಂಡ ಲೇಖನಗಳನ್ನು ನಾವು ನಿರೀಕ್ಷಿಸುತ್ತಿದ್ದೇವೆ. ಜೊತೆಗೆ ಬಹುಮುಖ್ಯವಾಗಿ ಈ ನೆಲದ ಜನರ ಧ್ವನಿಯಾಗುವ ಹಂಬಲದಿಂದ ಸಾರ್ವಜನಿಕ ಕುಂದು ಕೊರತೆಗಳನ್ನು ಹೇಳಿಕೊಳ್ಳಬಹುದು. ಓದುಗ ಪ್ರಭುಗಳಾದ ನೀವು ಪತ್ರಿಕೆಯ ಭಾಗವೂ ಹೌದು. ಹೀಗಾಗಿ ನಿಮ್ಮ ಪ್ರತಿಕ್ರಿಯೆಯೂ ನಮಗೆ ಅತ್ಯಮೂಲ್ಯ. **ಕಥೆ, ಕವನ, ಸಾಹಿತ್ಯ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಕ್ರೀಡೆ, ಕೃಷಿ, ಅಪರೂಪದ ವ್ಯಕ್ತಿಗಳು, ಅಂಕಣ, ಮಹಿಳೆ ಮತ್ತು ಮಕ್ಕಳು ಸೇರಿದಂತೆ ವಿವಿಧ ಕ್ಷೇತ್ರಗಳ** ಕುರಿತಾದ ನಿಮ್ಮ ಬರಹಗಳನ್ನೆಲ್ಲ ಸ್ವೀಕರಿಸುತ್ತೇವೆ ಆದರೆ, ಕಳುಹಿಸಿದ ಬರಹಗಳಲ್ಲಿ ಸಮಂಜಸ ಎನಿಸುವುದಷ್ಟೇ ಪ್ರಕಟಿಸುತ್ತೇವೆ. ನಮ್ಮ ನಂಬುಗೆಯ ಸಮಾಜಕ್ಕಾಗಿ ಒಳಿತನ್ನೇ ಬಯಸುತ್ತ, ಬರೆಯುತ್ತ ಎಲ್ಲರೂ ಒಳ ಗೊಳ್ಳೋಣ.



-: ಸಂಪಾದಕರು :-

ಹಂಪಿ ಟೈಮ್ಸ್, ಶ್ರೀ ಓಂಕಾರೇಶ್ವರ ದೇವಸ್ಥಾನದ ಪಕ್ಕದಲ್ಲಿ, ವಾಲ್ಮೀಕಿ ವೃತ್ತದ ಹತ್ತಿರ, ಹೊಸಪೇಟೆ, ವಿಜಯನಗರ ಜಿಲ್ಲೆ.
ಇ-ಮೇಲ್:hampitimes@gmail.com
M: 94486 33038



## ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರ ರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

– ಜಾಹೀರಾತು ವ್ಯವಸ್ಥಾಪಕರು.


# ಅನಾಥರ ಆಶ್ರಯದಾತ ಅರವಿಂದ

## ಆಶ್ರಯದಾತನಿಗೆ ಆಶ್ರಮ ಕಟ್ಟಿಸಿ ಕೊಡುಗೆ ನೀಡಿದ ಅನಾಥ

ಮಗ ಈ ಸಲ ದುಡ್ಡು ಹಾಕಿಲ್ಲ ಯಾಕೆ ಅಂತ ಹೇಳಿಲ್ಲ, ಆದರೆ ನಾನು ಅನಾಥಾಲಯದಲ್ಲಿ ಯಾರಿಗೂ ಉಪವಾಸ ಇಡುವ ಹಾಗಿಲ್ಲ ಎನ್ನುತ, ಇನ್ನು ಎರಡು ದಿನಗಳಲ್ಲಿ ರೇಷನ್ ಖಾಲಿ ಆಗುತ್ತೆ ಎಂದು ಅರವಿಂದರು ಯೊಚಿಸುತ್ತಿದರು.....

ಮಗ ದೊಡ್ಡ ಕಂಪನಿಯ ಸಿಇಒ ಅವರಿಗೆ ಸಮಯ ಸಿಗದ ಕಾರಣ ಹಣ ಹಾಕಲು ತಡವಾಗಿತ್ತು. ಇತ್ತ ರೇಷನ್ ಮುಗಿಯಿತು, ಅರವಿಂದ ಹೆಂಗೆ ಮಾಡೋದು ಎನ್ನುವತ್ತ ಯೋಚಿಸುತ್ತಿರುವಾಗ, ರವಿ ರೇಷನ್ ಹೊತ್ತುಕೊಂಡು ಬಂದು ಅರವಿಂದ ಅವರಿಗೆ ಕೊಟ್ಟನು....

ಅಯ್ಯೊ ರವಿ ನೀನೇಲಿಂದ ತಂದಿದ್ದೀಯಾ? ನಿನ್ನ ಹತ್ತಿರ ಹಣ ಎಲ್ಲಿಂದ ಬಂತು?...ನೀನು ಈಗ ಪದವಿ ವಿದ್ಯಾರ್ಥಿ ....

ಅಲ್ಲ ಅಪ್ಪಾಜಿ ನೀವು ಅನಾಥರದ ನಮಗೆ ಆಶ್ರಯ ಕೊಟ್ಟು ಊಟ ಮಾತ್ರ ಕೊಟ್ಟಿಲ್ಲ, ನಿಮ್ಮ ಕುಟುಂಬದವರ ನಡೆ ನನಗೆ ಮಾರ್ಗದರ್ಶನ ವಾಗಿದೆ. ನಿಮ್ಮಿಂದ ಬದುಕು ಕಟ್ಟಿಕೊಳ್ಳುವ ಭರವಸೆ ಕಲಿತಿದ್ದೇನೆ.

ಅರವಿಂದ: ನೀನಿನ್ನು ವಿದ್ಯಾರ್ಥಿ ನೀನೇಕೆ ಭಾರ ಹೊರುತ್ತಿಯಾ? ಮೊದಲು ಶಿಕ್ಷಣ ಮುಗಿಸು...

ರವಿ: ಅಪ್ಪಾಜಿ ನಾವು ಅನಾಥಾಶ್ರಮದಲ್ಲಿರುವ ತೋಟದಲ್ಲಿ ಹೂವಿನ ಸಸಿಗಳನ್ನು, ತರಕಾರಿ ಗಿಡಗಳನ್ನು ಹಾಕಿದ್ದೇನೆ ಅವುಗಳನ್ನು ಮಾರಾಟ ಮಾಡುತ್ತೇವೆ.... ಈ ಹಣ ನಾವು ಕೂಡಿಟ್ಟಿದ್ದೇವೆ, ಹಾಗೆಯೆ ನಮ್ಮೆಲ್ಲರಿಗೂ ಬರುವ ಶಿಷ್ಯ ವೇತನವನ್ನು ಕೂಡ ನಾವು ಹಾಗೆಯೆ ಕೂಡಿಟ್ಟಿದ್ದೇವೆ, ರೇಷನ್ ಇಲ್ಲ ಎನ್ನುವ ನಿಮ್ಮ ಚಡಪಡಿಕಿಸುವಿಕೆ ನನ್ನಿಂದ ನೋಡಲು ಆಗದು, ಪಾಲಕರಿಲ್ಲದ ನಮ್ಮನ್ನು ಪೋಷಿಸುತ್ತಿರುವ ಪೋಷಕರು ನೀವು.... ನನ್ನಲ್ಲಿರುವ ಅಲ್ಪ ಹಣ ನಿಮಗೆ ಕೊಟ್ಟಿದ್ದೇನೆ ದಯವಿಟ್ಟು ನೀವು ಚಿಂತಿಸಬೇಡಿ .

ಈಗ ನಾವು ಕೂಡ ದೊಡ್ಡವರಾಗಿದ್ದೇವೆ, ನಮಗೆ ಆರ್ಥಿಕವಾಗಿ ಸದೃಢರಾಗಲು ಬೇಕಾದ ಎಲ್ಲಾ ರೀತಿಯ ಶಿಕ್ಷಣವನ್ನು ಕೊಟ್ಟಿದ್ದೀರಿ, ಅದರಲ್ಲೂ ವೃತ್ತಿಪರ ಶಿಕ್ಷಣ ಕಲಿಸಿಕೊಟ್ಟಿದ್ದೀರಿ. ನಾವು ಬೆಳ್ಳಂ ಬೆಳಗ್ಗೆ ಎದ್ದು ವಾಕಿಂಗ್ ಗೆ ಹೋಗುತ್ತೇವೆ , ಹಾಗೆ ಅದರೊಟ್ಟಿಗೆ ದಿನಪತ್ರಿಕೆ ಹಾಗೂ ಹಾಲನ್ನು ಮನೆ ಮನೆಗೆ ತಲುಪಿಸಿ ಅಲ್ಪ ಪ್ರಮಾಣದಲ್ಲಿ ಹಣ ಮಾಡಿಕೊಳ್ಳುತ್ತೇವೆ. ಶಾಲಾ ಕಾಲೇಜು ಸಮಯದಲ್ಲಿ ಶಾಲೆಗೆ ಹೋಗುತ್ತೇವೆವೆ. ಸಾಯಂಕಾಲ ಬಂದೊಡನೆ ನಮ್ಮ ಆಶ್ರಮದ ಸುತ್ತ ಇರುವ ವಾತಾವರಣದಲ್ಲಿ ನಾವು ಗಿಡಮರಗಳನ್ನು, ತರಕಾರಿ ಗಿಡಗಳನ್ನು, ಹೂವಿನ ಗಿಡಗಳನ್ನು ಬೆಳೆಸಿದ್ದೇವೆ. ಇವುಗಳಿಂದ ಬಂದ ಹಣವನ್ನು ನಾವು ಕೂಡಿಡಿತ್ತಿದ್ದೇವೆ. ಹಣವನ್ನು ಮುಂದಿನ ದಿನದಲ್ಲಿ ಆಶ್ರಮಕ್ಕೆ ಬಳಕೆ ಮಾಡೋಣ ಎನ್ನುವಾಗ..

ಅರವಿಂದ್: ಇದೆಲ್ಲ ನಾನು ಗಮನಿಸಿಯೆ ಇಲ್ಲವಲ್ಲ, ಹೇಗೆ ನಿಭಾಯಿಸುತ್ತೀರಿ? ನೀವು ಇನ್ನೂ ವಿದ್ಯಾರ್ಥಿಗಳು, ನಿಮ್ಮ ಭವಿಷ್ಯ ರೂಪಿಸಬೇಕು ನಿಮ್ಮ ಮೇಲೆ ಭಾರ ಹಾಕುವುದಲ್ಲ, ದಯವಿಟ್ಟು ನನ್ನನ್ನು ಕ್ಷಮಿಸಿ ಮಕ್ಕಳೇ...

ರವಿ; ಅಪ್ಪಾಜಿ ನೀವು ನಮ್ಮಗೆ ರಕ್ಷಣೆ ಕೊಟ್ಟಿದ್ದೀರಿ, ಅದರೊಟ್ಟಿಗೆ ನೈತಿಕ ಪಾಠ ಹೇಳಿಕೊಡುತ್ತೀರಿ, ನಮ್ಮ ತಂದೆ ತಾಯಿಯ ಕೊರತೆ ನೀಗಿಸಿದ್ದೀರಿ... ನೀವು ನಮ್ಮನ್ನು ಸ್ವಾಭಿಮಾನಿ ಹಾಗೂ ಆರ್ಥಿಕತೆ ಯಿಂದ ಸದೃಢವಾಗಿ ಬದುಕುವುದನ್ನು ಕಲಿಸಿಕೊಟ್ಟಿದ್ದೀರಿ, ನಮಗೆ ತಂದೆ ತಾಯಿ ಇದ್ದರೂ ಈ ರೀತಿಯ ಬದುಕು ಕಟ್ಟಿಕೊಳ್ಳುವುದಕ್ಕೆ ಸಾಧ್ಯವಾಗುತ್ತಿರಲಿಲ್ಲ ಎನೊ...

ಅರವಿಂದ: ಸರಿ ರವಿ ಧನ್ಯವಾದ ಮಗು ನಾಳೆಯಿಂದ ನಾನು ಎಲ್ಲವನ್ನೂ ನಿಭಾಯಿಸುತ್ತೇನೆ. ನೀನು ನಿನ್ನ ಹಣವನ್ನು ಕೂಡಿಟ್ಟುಕೋ ಎಂದರು.



ನಂದಿನಿ ಸನಬಾಲ್
ಶಿಕ್ಷಕಿ, ಗುಲ್ಬರ್ಗಾ

Scan For Digital Colourful
HAMPI TIMES E-paper

ಇತ್ತೀಚಿನ ದಿನಮಾನಗಳಲ್ಲಿ ಅನಾಥಾಶ್ರಮಗಳನ್ನು ನೋಡಿದಾಗ ಅನೇಕ ಸಮಸ್ಯೆಗಳನ್ನು ಕಾಣುತ್ತೇವೆ, ಅನ್ಯೈತಿಕ ಚಟುವಟಿಕೆಗಳಿಗೂ ಕೂಡ ಅನಾಥಾಶ್ರಮದಲ್ಲಿರುವವರು ಬಲಿಯಾಗುವುದುಂಟು!. ಆದರೆ ಅರವಿಂದ್ ಅವರ ಆಶ್ರಮ ಸಾರ್ಥಕತೆಗೆ ಒಂದು ಉದಾಹರಣೆ.

ನಮ್ಮ ಸಮಾಜ ಸೇವೆ ಸ್ವಾರ್ಥತೆಯಿಂದ ಕೂಡಿರ ಬಾರದು, ಹೆಸರು ಕಳಿಸುವು ದಕ್ಕಾಗಿ ಹಣ ಮಾಡುವು ದಕ್ಕಾಗಿ ಸಮಾಜ ಸೇವೆ ಮಾಡುವು ದಲ್ಲ, ನಿಸ್ವಾರ್ಥದ ಸಮಾಜ ಸೇವೆ ಇರಬೇಕು.

ಕೆಲವು ವರ್ಷಗಳ ನಂತರ ಮುಂದಿನ ದಿನಗಳಲ್ಲಿ ಅರವಿಂದ



ಅನಾಥಾಶ್ರಮಗಳು ಪ್ರಾರಂಭ ವಾದವು....

ಪ್ರತಿ ಅನಾಥಾಶ್ರಮದ ಉದ್ಘಾಟನೆಯು ಅರವಿಂದ್ ಅವರಿಂದ ಮಾಡಿಸುತ್ತಿದ್ದರು, ಇಷ್ಟೊಂದು ಅನಾಥಾಶ್ರಮಗಳು ವೃದ್ಧಾಶ್ರಮಗಳು ಸ್ಥಾಪನೆಯಾಗಿದ್ದು ಸಂತೋಷದ ವಿಚಾರ. ಎನ್ನುವಾಗ ಅಲ್ಲಿ ಅನೇಕ ವಿಶೇಷತೆಗಳು ಕಂಡು ಬಂದವು. ಅಲ್ಲಿ ಅವರು ಅನಾಥಾಶ್ರಮವನ್ನು ನೋಡಿದಾಗ ಅಲ್ಲಿನ ಅನಾಥಾಶ್ರಮಗಳಲ್ಲಿ ದೇವಸ್ಥಾನ, ಧ್ಯಾನ ಮಂದಿರ, ಆಟದ ಮೈದಾನ, ಗ್ರಂಥಾಲಯ, ಹೂವಿನ ತೋಟ, ಹಣ್ಣಿನ ತೋಟ ಅನೇಕ ವ್ಯವಸ್ಥೆಗಳು ಕಂಡು ಬಂದವು.

ಅರವಿಂದ ಅವರು ಅನಾಥಾಶ್ರಮದಲ್ಲಿರುವ ವ್ಯವಸ್ಥೆ ನೋಡಿ ಬೆರಗಾದರು, ಯಾವ ಹಾಸ್ಟೆಲಗಳಲ್ಲೂ ಕೂಡ ಈ ತರದ ವ್ಯವಸ್ಥೆ ಕಾಣಿಸುವುದಿಲ್ಲ, ಆದರೆ ಈ ಆಶ್ರಮಗಳು ತುಂಬಾ ಅಚ್ಚುಕಟ್ಟಾಗಿವೆ, ಮನೆಗಳಲ್ಲಿಯೂ ಸಿಗದ ವಾತಾವರಣವನ್ನು ಅನಾಥಾಶ್ರಮಗಳಲ್ಲಿ ಕಂಡರು.....

ಈ ಅನಾಥಾಶ್ರಮದ ಮಾಲೀಕರನ್ನು ಭೇಟಿ ಮಾಡಿಸಿ ಅಂದಾಗ...... ಅತ್ತ ಕಡೆಯಿಂದ ಕಾರಿನಲ್ಲಿ ಬಂದು ಅರವಿಂದ್ ಅವರ ಪಾದಕ್ಕೆ ಸ್ಪರ್ಶಿಸಿ ನಮಸ್ಕರಿಸಿದ ರಮೇಶನನ್ನು.... ಎಲ್ಲರೂ ಬೆರಗಾಗಿ ನೋಡುತ್ತಿದ್ದರು, ಇವರು ಈ ಅನಾಥಾಶ್ರಮದ ಮಾಲೀಕರು ಎನ್ನುವಾಗ. . ಅಯ್ಯೋ, ನೀವ್ ಯಾಕೆ ನನ್ನ ಪಾದಕ್ಕೆ ನಮಸ್ಕರಿಸಿದ್ದೀರಿ ನೀವು ದೊಡ್ಡ ವ್ಯಕ್ತಿ, ಅನಾಥಾಶ್ರಮದ ವ್ಯವಸ್ಥೆಯನ್ನು ಕಂಡು ತುಂಬಾ ಖುಷಿಯಾಯಿತು ನನಗೆ, ನಿಮ್ಮ ತಂದೆ-ತಾಯಿ ಪುಣ್ಯವಂತರು ನಿನ್ನಂತ ಮಗನನ್ನು ಪಡೆದಿದ್ದಾರೆ.... ಎನ್ನುವಾಗ

ಅಯ್ಯೋ ಅಪ್ಪಾಜಿ ನಾನು ನಿಮ್ಮ ಆಶ್ರಮದಲ್ಲಿ ಬೆಳೆದ ಹುಡುಗ, ರಸ್ತೆಯ ಪಕ್ಕದಲ್ಲಿ ರಕ್ತದ ಮಡಿವಿನಲ್ಲಿದ್ದ ನನ್ನನ್ನು, ನನ್ನ ಹೆತ್ತವರು ಬಿಟ್ಟು ಹೋದಾಗ ನನ್ನನ್ನು ತಂದು ನಿಮ್ಮ ಆಶ್ರಮದಲ್ಲಿ ಬೆಳೆಸಿ ಶಿಕ್ಷಣ ಕೊಟ್ಟಿದ್ದೀರಿ, ಉನ್ನತ ಶಿಕ್ಷಣಕ್ಕೆ ನನ್ನನ್ನು ಹೊರದೇಶಕ್ಕೆ ಕಳಿಸಿದ್ದೀರಲ್ಲ ಅವನೇ ನಾನು ರಮೇಶ.... ಇವತ್ತು ನನ್ನಲ್ಲಿ ಎಲ್ಲವೂ ಇದೆ, ನನ್ನ ಬದುಕಿಗೆ ರೆಕ್ಕೆ ಕೊಟ್ಟವರು ನೀವು, ನಿಮ್ಮ ಮಾರ್ಗದಲ್ಲಿ ನಾನು ಬೆಳೆದವನು, ನಾನು ಕೂಡ ನನ್ನ ದುಡಿಮೆಯ ಹಣದಿಂದ ಅನಾಥಾಶ್ರಮಗಳನ್ನು ನಡೆಸಲು ನಿರ್ಧರಿಸಿದ್ದೇನೆ. ನಿಮ್ಮ ಹಾಗೆ ನಿಸ್ವಾರ್ಥ ಸೇವೆ ಮಾಡುವ ಹಂಬಲ ಇದೆ.

ನಾನು ನಿಮ್ಮ ಗರಡಿಯಲ್ಲಿ ಬೆಳೆದವನು, ನಿಮ್ಮ ಹಾಗೆ ನಿರಾಶ್ರಿತರಿಗೆ ಆಶ್ರಯ ನೀಡುವ ಮನೋಭಾವನೆ ನನ್ನದು...

ಈಗ ನಾನು ಉನ್ನತ ಶಿಕ್ಷಣ ಪಡೆದು ಸಾಕಷ್ಟು ಹಣವನ್ನು ಗಳಿಸುತ್ತಿದ್ದೇನೆ, ನಿಮ್ಮ ಹಾಗೆ ನಾನು ಕೂಡ ಅನೇಕ ಅನಾಥ ಮಕ್ಕಳಿಗೆ ಜೀವನ ರೂಪಿಸಿ ಕಟ್ಟಿಕೊಳ್ಳುವ ಒಂದು ಮಹಾದಾಸೆಯನ್ನು ಹೊತ್ತು ಆಶ್ರಮವನ್ನು ನಡೆಸುವ ನಿರ್ಧಾರ ಮಾಡಿದ್ದೇನೆ....

ಅದಕ್ಕೆ ಅರವಿಂದ ಆಶ್ರಮ ಎಂಬ ಹೆಸರು ಕೊಟ್ಟಿದ್ದೇನೆ.... ನಿಮ್ಮ ಅಮೃತ ಹಸ್ತದಿಂದ ಇದನ್ನು ಉದ್ಘಾಟಿಸಿ ಎಂದಾಗ...... ಅರವಿಂದ್ ಅವರಿಗೆ ಎಲ್ಲಿಲ್ಲದ ಹರುಷ ...

ನನ್ನ ಆಶ್ರಮದಲ್ಲಿ ನಿಮ್ಮಂತ ಮಕ್ಕಳು ಜೀವನವನ್ನು ರೂಪಿಸಿಕೊಂಡು ಇತರರಿಗೆ ಬೆಳಕಾಗಿರುವುದು, ನನ್ನ ಸೇವೆಗೆ ಸಂದ ಗೌರವ ಧನ್ಯವಾದಗಳು... ನಿನ್ನ ಸೇವೆ ಮುಂದುವರಿಸು ಎಂದು ಆಶೀರ್ವದಿಸಿದರು.

ನಮ್ಮ ಸೇವೆಯು ನಿಸ್ವಾರ್ಥತೆಯಿಂದ ಕೂಡಿದ್ದರೆ, ಮುಂದೆ ಸಿಗುವ ಫಲವು.... ಫಲವತ್ತತೆಯಿಂದ ಕೂಡಿರುತ್ತದೆ. ನನ್ನ ಕಾರ್ಯಗಳು ಇತರರಿಗೆ ಮಾರ್ಗದರ್ಶಿಯಾಗಿ ಪ್ರೋತ್ಸಾಹ ನೀಡಬೇಕು. ಕೇವಲ ತೋರಿಕೆಗಾಗಿ ಮಾಡುವಂತ ಕೆಲಸಗಳು ಯಾವತ್ತು ಯಶಸ್ವಿಯಾಗುವುದಿಲ್ಲ.

ಅನೇಕ ವೃದ್ಧಾಶ್ರಮಗಳು ಹಾಗೂ ಅನಾಥಾಲಯಗಳನ್ನು ನಾವು ನೋಡಿದ್ದೇವೆ. ಅಲ್ಲಿ ಸಮಸ್ಯೆಗಳ ಸಾಗರವಿದೆ, ಜನರ ಮೇಲೆ ನಡೆಯುತ್ತಿರುವ ದಬ್ಬಾಳಿಕೆಗಳು, ಅನ್ಯೈತಿಕ ಚಟುವಟಿಕೆಗಳು, ಅದರಲ್ಲಿಯೂ ವಿಶೇಷವಾಗಿ ಹೆಣ್ಣು ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಹಾಗೂ ವಿವಿಧ ರೀತಿಯ ಒತ್ತಡಗಳನ್ನು ಹಾಕುತ್ತಿರುವುದು ಕಂಡು ಬಂದಿದೆ, ಅಲ್ಲಿ ತುಂಬಾ ಭಯದ ವಾತಾವರಣವಿದೆ, ಅಲ್ಲಿ ಅನೇಕ ಅನಾನುಕೂಲತೆಗಳು ಕಂಡುಬಂದಿದೆ, ನರಕ ಕಣ್ರಿ. ದಯವಿಟ್ಟು ಇಂಥ ಕ್ರೂರ ಮನಸ್ಥಿತಿಯವರು ನಿಮ್ಮ ಮನಸ್ಸನ್ನು ಪರಿವರ್ತಿಸಿಕೊಂಡು ನಿಜವಾದ ಸೇವೆ ಮಾಡುವವದಾದರೆ ಮಾತ್ರ ಇಂತಹ ಆಶ್ರಮಗಳನ್ನು ನಡೆಸಿ ಇಲ್ಲ ಎಂದರೆ ದಯವಿಟ್ಟು ಮುಗ್ಧ ಜೀವಿಗಳನ್ನು ಬದುಕಲು ಬಿಡಿ.

ಮೊದಲು ಅನಾಥಾಶ್ರಮಗಳು ಹಾಗೂ ವೃದ್ಧಾಶ್ರಮಗಳು ನಿರಾಶ್ರಿತರಿಗೆ, ಅನಾಥರಿಗೆ, ಬಡವರಿಗೆ, ವೃದ್ಧರಿಗೆ ಆಸರೆ ಕೊಡುವ ತಾಣಗಳು ಆಗಿದ್ದವು.

ಆದರೆ ಇತ್ತೀಚಿನ ದಿನಗಳಲ್ಲಿ ಹಣ ಗಳಿಸುವ ಉದ್ದೇಶಗಳಿಂದ ಅನಾಥಾಶ್ರಮಗಳನ್ನು ನಡೆಸುತ್ತಿದ್ದರೆ ಇನ್ನೂ ಕೆಲವರು ಕೈಯಿಂದ ಹಣ ಹಾಕಿ ಅನಾಥಾಶ್ರಮಗಳನ್ನು ನಡೆಸಿದರೆ ಮುಂದೆ ಸರಕಾರದ ಫಂಡ್ ಹಾಗೂ ದೇಶ ವಿದೇಶಗಳ ಅನೇಕ ಸಂಘ ಸಂಸ್ಥೆಗಳಿಂದ ಹಣ ಗಳಿಸಬಹುದು ಎಂದು ವೃದ್ಧಾಶ್ರಮಗಳನ್ನು ನಡೆಸುತ್ತಿರುವುದನ್ನು ನೋಡಿದ್ದೇನೆ .

ಸರಕಾರ ಅನಾಥಾಶ್ರಮ ಮತ್ತು ವೃದ್ಧಾಶ್ರಮಗಳ ಕಡೆ ಗಮನ ಕೊಡಬೇಕು, ಹಣ ಗಳಿಕೆ ಮಾಡಲು ಮುಂದಾದ ಇಂತಹ ಸೇವಾ ಸಂಸ್ಥೆಗಳಿಗೆ ಕಡಿವಾಣ ಹಾಕಿ.... ಇಲ್ಲದಿದ್ದರೆ ಜನರಿಗೆ ಯಾವ ಸಂಸ್ಥೆಗಳ ಮೇಲು ನಂಬಿಕೆ ಬರುವುದಿಲ್ಲ.

# ಪೌರನೌಕರರ ಬೇಡಿಕೆ ನ್ಯಾಯಯುತ : ಶಾಸಕ ನೇಮಿರಾಜ ನಾಯ್ಕ

■ **ಹಂಪಿ ಟೈಮ್ಸ್ ಮರಿಯಮ್ಮನಹಳ್ಳಿ**

ತಮ್ಮನ್ನು ಸರ್ಕಾರಿ ನೌಕರರು ಎಂದು ಪರಿಗಣಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಸಬೇಕು ಎಂದು ಕರ್ನಾಟಕ ರಾಜ್ಯ ಪೌರಸೇವಾ ನೌಕರರ ಸಂಘದಿಂದ ಇಲ್ಲಿನ ಪ.ಪಂ. ಕಚೇರಿಯಲ್ಲಿ ಕಾರ್ಯ ನಿರ್ಹವಹಿಸುತ್ತಿರುವ ಪೌರ ನೌಕರರು ತಮ್ಮ ಕಚೇರಿ ಕೆಲಸ ಕಾರ್ಯ ಗಳನ್ನು ಸ್ಥಗಿತಗೊಳಿಸಿ ನಡೆಸುತ್ತಿರುವ ಅನಿರ್ದಿ ಷ್ಟಾವಧಿ ಮುಸ್ಕರ ಗುರುವಾರಕ್ಕೆ ಮೂರನೇ ದಿನಕ್ಕೆ ಕಾಲಿಟ್ಟಿತು.

ಪೌರ ನೌಕರರು ತಮ್ಮ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ತಮ್ಮ ಬೇಡಿಕೆಗಳ ಮನವಿ ಪತ್ರವನ್ನು ಸಂಸದ ಈ. ತುಕಾರಾಂ ಮತ್ತು ಶಾಸಕ ಕೆ. ನೇಮಿರಾಜ್ ನಾಯ್ಕ್ ಅವರಿಗೆ ಸಲ್ಲಿಸಿದರು.

ಮನವಿ ಪತ್ರ ಸ್ವೀಕರಿಸಿದ ಶಾಸಕ ಕೆ. ನೇಮಿರಾಜ್ ನಾಯ್ಕ್ ಮಾತನಾಡಿ, ಪೌರ ನೌಕರರು ತಮ್ಮ



ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಕಳೆದ ಮೂರು ದಿನಗಳಿಂದ ಅನಿರ್ದಿಷ್ಟಾವಧಿ ಮುಷ್ಕರ ನಡೆಸುತ್ತಿರುವ ಬಗ್ಗೆ ಅಧಿವೇಶನದಲ್ಲಿ ಈ ಕುರಿತು ಸರ್ಕಾರದಲ್ಲಿ ಪೌರ ನೌಕರರ ಬೇಡಿಕೆಗಳ ಬಗ್ಗೆ ಧ್ವನಿ ಎತ್ತುವೆ. ಪೌರ ನೌಕರರು ತಮ್ಮ ಬೇಡಿಕೆಗಳನ್ನು ಕೇಳುವುದರಲ್ಲಿ ಸರಿ ಇದೆ. ಇವತ್ತಿನ ದಿನಮಾನಗಳಲ್ಲಿ ಜೀವನ ನಡೆಸುವುದು ಕಷ್ಟಕರ ವಾಗಿದ್ದು, ಪೌರ ನೌಕರರ ಬೇಡಿಕೆಗಳನ್ನು ಈಡೇರಿಸುವಂತೆಸರ್ಕಾರಕ್ಕೆಒತ್ತಾಯಿಸಲಾಗುವುದು ಎಂದು ಅವರು ಹೇಳಿದರು.

ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ಮರಿಯಮ್ಮನಹಳ್ಳಿ ಪಟ್ಟಣ ಪಂಚಾಯಿತಿ ಶಾಖೆಯ ಅಧ್ಯಕ್ಷ ಸಿ. ಹನುಮಂತ, ಗೌರವಾಧ್ಯಕ್ಷ ಆದಿಮನಿ ಹೊನ್ನೂರ್ ಭಾಷ, ಉಪಾಧ್ಯಕ್ಷ ಎಚ್. ಚಿದಾನಂದ, ಪ್ರಧಾನ ಕಾರ್ಯದರ್ಶಿ ಎಚ್. ನಾಗವೇಣಿ, ಖಜಾಂಚಿ ಆರ್. ನಾಗರಾಜ, ಸಂಘದ ನಿರ್ದೇಶಕರಾದ ಎಸ್. ಅನಿಲ್ ಕುಮಾರ್, ಜಿ. ಹನುಮಂತ, ಸಂಘಟನಾ ಕಾರ್ಯ ದರ್ಶಿ ಎಚ್. ಎಂ. ಸಮಾದಪ್ಪ, ಸಹ ಸಂಘಟನಾ ಕಾರ್ಯದರ್ಶಿ ಟಿ. ಅನಿಲ್ ಕುಮಾರ್, ಸಂಘದ ಸದಸ್ಯರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA, PRGI No:KARKAN/2023/88055

## ಕವಿ ಮನಸು

### ದಾರಿ ದೀಪ

ಬನ್ನಿ, ಬನ್ನಿ ಮಕ್ಕಳಿರ,
ಶಾಲೆ ಕರೆಯುತಿದೆ ನಿಮ್ಮನ್ನ.
ಜ್ಞಾನದ ದೀಪ ಹಚ್ಚಿ,
ಭವಿಷ್ಯವ ಬೆಳಗಲು.
ಆಟ, ಪಾಠಗಳ ಲೋಕವಿದು,
ನಲಿಯುತ ಕಲಿಯುವ ತಾಣವಿದು.
ಸ್ನೇಹ ಬೆಳೆಸಿ, ನಲಿವು ಹಂಚಿ,
ನಮ್ಮದೆ ಈ ಶಾಲೆ.
ಕಥೆ, ಕವಿತೆ, ಹಾಡುಗಳು,
ಚಿತ್ರ, ವಿಜ್ಞಾನದ ಪಾಠಗಳು.
ಪ್ರಶ್ನೆ ಕೇಳಿ, ಉತ್ತರ ಕಂಡುಕೊಳ್ಳಿ,
ಬುದ್ಧಿಯ ದಾರಿ ತೆರೆಯಿರಿ.
ಗುರುಗಳು ನಿಮಗೆ ದಾರಿ ದೀಪ,
ಸ್ನೇಹಿತರು ನಿಮ್ಮ ಜೊತೆಗಾರರು.
ಪ್ರತಿ ದಿನವೂ ಹೊಸ ಕಲಿಕೆ,
ನಮ್ಮ ಶಾಲೆಯಲಿ ನಲಿವು.
ಹೆದರದಿರಿ, ಹಿಂಜರಿಯದಿರಿ,
ಶಾಲೆ ಒಂದು ಸಿಹಿ ಜಗತ್ತು.
ಬನ್ನಿ, ಬನ್ನಿ ಮಕ್ಕಳಿರ,
ಭವಿಷ್ಯವ ರೂಪಿಸಿಕೊಳ್ಳಿ.

– ಎಚ್‌ಟಿಬಿ

### ಅಕ್ಕರೆಯ ತೋರಮ್ಮ



ಅಂಬಿಕೆಯೆ
ದಯೆದೋರು
ಸನ್ನಿಧಿಗೆ ಬಂದಿರುವೆ
ಇಂಬಿತ್ತು ಸಲಹೆನ್ನ
ಲೋಕಮಾತೆ
ನಂಬಿರುವ ಭಕ್ತರನು
ಸಲಹಮ್ಮ ಒಲವಿನಲಿ
ಹಂಬಲದಿ ಕಾದಿರುವೆ
ಶಕ್ತಿದಾತೆ

ತುಪ್ಪದಲಿ ಮಾಡಿರುವ
ಕಜ್ಜಾಯ ಒಬ್ಬಟ್ಟು
ಒಪ್ಪದಲಿ ಇರಿಸಿರುವೆ ಚರಣದಲ್ಲಿ
ಅರ್ಪಿಸಿಕೊ ಒಲವಲ್ಲಿ ಕಂದನಿವನೆಂದೆನುತ
ತಪ್ಪಿರಲು ಮನ್ನಿಪುದು ಕರುಣದಲ್ಲಿ

ಭಕ್ತಿಯಲಿ ಕರ್ಪೂರದಾರತಿಯ
ಬೆಳಗುವೆನು
ಶಕ್ತಿಯನು ನೀನೀಡು ಬದುಕಿನಲ್ಲಿ
ಅಕ್ಕರೆಯ ನೀ ತೋರಿ ರಕ್ಷಿಪುದು ಜಗವನ್ನು
ಭಕ್ತಿಯನು ತುಂಬೆನ್ನ ಹೃದಯದಲ್ಲಿ

ಕಾಡುತಿರೆ ದುರ್ಜನರು ಎಡೆಬಿಡದೆ
ಸಜ್ಜನರ
ಬೇಡುವೆನು ನೀನೊಮ್ಮೆ ಬಂದು ನೋಡು
ಕಾಡುತಿಹ ದುರುಳರನು ಸದೆಬಡಿಯೆ
ಬಾರಮ್ಮ
ಕಾದಿರುವ ಭಕ್ತರನು ಪಾರು ಮಾಡು॥

– ಪೆರ್ಮುಖ ಸುಬ್ರಹ್ಮಣ್ಯ ಭಟ್

## ಮೈಕ್ರೋ ನ್ಯೂಸ್

### ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಸಂಡೂರು**

ಸಂಡೂರು ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ 2025–26 ನೇ ಸಾಲಿಗೆ (ಪಿ.ಯು.ಸಿ, ಐ.ಟಿ.ಐ, ಡಿಪ್ಲೋಮೋ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶ ಪಡೆಯಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 2ಬಿ, 3ಎ, 3ಬಿ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಇತರೆ ಜನಾಂಗದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು.

ಸಂಡೂರು ಪಟ್ಟಣದ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯ ಮತ್ತು ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ ಅಗತ್ಯ ದಾಖಲೆಗಳೊಂದಿಗೆ ಆನ್‌ಲೈನ್ ವೆಬ್‌ಸೈಟ್ http://bcwd.karnataka.gov.in/ ಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜೂನ್ 20 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಂಡೂರು ಪಟ್ಟಣದ ವಾಲ್ಮೀಕಿ ವತ್ತದ ತಾಲ್ಲೂಕು ಹಿಂದುಳಿದ ವರ್ಗಗಳ ಕಾರ್ಯಾಲಯ ಅಥವಾ ದೂ.08395–295180 ಗೆ ಸಂಪರ್ಕಿಸಬಹುದು ಎಂದು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ವೀರಭದ್ರಯ್ಯ ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಡವರ ಹಸಿವು ನೀಗಿಸಲು ಇಂದಿರಾ ಕ್ಯಾಂಟೀನ್ ಆರಂಭ

## ಸಂಸದ ಈ ತುಕರಾಂ ಹೇಳಿಕೆ। ಹ.ಬೊ.ಹಳ್ಳಿಯಲ್ಲಿ ಕ್ಯಾಂಟೀನ್ ಉದ್ಘಾಟನೆ





**ಹಂಪಿ ಟೈಮ್ಸ್ ಹಗರಿಬೊಮ್ಮನಹಳ್ಳಿ**

ಬಡವರು ಹಸಿವಿನಿಂದ ಇರಬಾರದೆಂದು ಹೊತ್ತೊತ್ತಿಗೆ ಕಡಿಮೆ ಧರದಲ್ಲಿ ಹಸಿವು ನೀಗಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇಂದಿರಾ ಕ್ಯಾಂಟಿನ್‌ಗಳನ್ನು ರಾಜ್ಯಾಂದ್ಯಾಂತ ಆರಂಭಿಸಿದ್ದು, ಎಲ್ಲೆಡೆ ಇಂದಿರಾ ಕ್ಯಾಂಟಿನ್‌ಗಳು ರುಚಿಕರ ಆಹಾರದೊಂದಿಗೆ ಉತ್ತಮ ಸೇವೆ ನೀಡುತ್ತಿವೆ ಎಂದು ಸಂಸದ ಈ ತುಕಾರಾಂ ಹೇಳಿದರು.

ಪಟ್ಟಣದ ಎಪಿಎಂಸಿ ಆವರಣದಲ್ಲಿ ನೂತನ ವಾಗಿ ನಿರ್ಮಾಣಗೊಂಡ ಇಂದಿರಾ ಕ್ಯಾಂಟಿನ್ ನನ್ನು ಸಂಸದ ಈ.ತುಕಾರಾಂ ಮತ್ತು ಶಾಸಕ ಕೆ.ನೇಮಿರಾಜನಾಯ್ಕ ಅವರು ಗುರುವಾರ ಉದ್ಘಾಟಿಸಿ ಸುದ್ದಿಗಾರರೊಂದಿಗೆ ಮಾತನಾಡಿದರು.

ಇಂದು ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದ ಮರಿಯಮ್ಮನಹಳ್ಳಿ, ಹಗರಿಬೊಮ್ಮನಹಳ್ಳಿ ಮತ್ತು ಕೊಟ್ಟೂರು ಪಟ್ಟಣಗಳಲ್ಲಿ ಇಂದಿರಾ ಕ್ಯಾಂಟಿನ್‌ಗಳನ್ನು ಉದ್ಘಾಟಿಸಲಾಗಿದೆ. ಸಾಮಾನ್ಯ ಜನರಿಗೆ ಉತ್ತಮ ಸೇವೆ ನೀಡುವ ಮೂಲಕ ಹಸಿವನ್ನು ನೀಗಿಸುವ ಕಾರ್ಯ ನಡೆಯಲಿ ಎಂದ ಅವರು, ಮೊದಲ ದಿನ ಕ್ಯಾಂಟಿನ್‌ನಲ್ಲಿ ಬಿಸಿಬಿಸಿ ಕೇಸರಿಬಾತ್, ಪಲಾವ್ ಮತ್ತು ಮಿರ್ಚಿಯನ್ನು ಜನರಿಗೆ ಸಂಸದ ಈ.ತುಕಾರಾಂ, ಶಾಸಕ ಕೆ.ನೇಮಿರಾಜ ನಾಯ್ಕ ಊಟ ಬಡಿಸಿದರು.

ಈ ವೇಳೆ ಪುರಸಭೆ ಅಧ್ಯಕ್ಷ ಮರಿರಾಮಪ್ಪ, ಸದಸ್ಯರಾದ ಖಾಜಾಬನ್ನಿ ಅಲ್ಲಾಭಕ್ಷಿ, ಪವಾಡಿ ಹನುಮಂತಪ್ಪ, ಜೋಗಿ ಹನುಮಂತ, ಕೆ. ಎಂ.ನವೀನ್, ನಾಗರಾಜ ಜನ್ನು, ಕಮಲಮ್ಮ, ಗುಂಡ್ರು ಸರಸ್ವತಿ, ದೀಪಕ್ ಕಠಾರೆ, ಗ್ಯಾರಂಟಿ ಅನುಷ್ಠಾನ ಸಮಿತಿಯ ಜಿಲ್ಲಾಧ್ಯಕ್ಷ ಕುರಿಶಿವಮೂರ್ತಿ, ಮಾಜಿ ಜಿಪಂ ಸದಸ್ಯ ಅಕ್ಕಿ ತೋಟೇಶ್, ಮುಖಂಡರಾದ ಕನ್ನಿಹಳ್ಳಿ ಚಂದ್ರಶೇಖರ್, ಬಾಲಕೃಷ್ಣ ಬಾಬು, ಸಂದೀಪ್ ಶಿವಮೊಗ್ಗ, ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಕೋರಿ ಗೋಣಿಬಸಪ್ಪ, ತಹಸೀಲ್ದಾರ ಆರ್.ಕವಿತಾ, ಪುರಸಭೆ ಮುಖ್ಯಾಧಿಕಾರಿ ಪ್ರಭಾಕರ್ ಪಾಟೀಲ್, ಸಿಪಿಐ ವಿಕಾಸ್ ಲಮಾಣಿ, ಪಿಎಸ್‌ಐ ಬಸವರಾಜ ಅಡವಿಬಾವಿ ಇತರರಿದ್ದರು.

# 80 ಟಿಎಂಸಿ ನೀರು ಮಾತ್ರ ಸಂಗ್ರಹ

## ತುಂಗಭದ್ರಾ 19ನೇ ಗೇಟ್ ಕಾಮಗಾರಿ ಜುಲೈ ಅಂತ್ಯದೊಳಗೆ ಪೂರ್ಣ

### 19ನೇ ಗೇಟಿಗೆ 1.66 ಕೋಟಿ ರೂ । ಇನ್ನುಳಿದ 32 ಹೊಸ ಗೇಟ್ ನಿರ್ಮಾಣಕ್ಕೆ 52 ಕೋಟಿ ಮೊತ್ತದ ಟೆಂಡರ್ ಕರೆಯಲಾಗಿದೆ : ಸಂಸದ ರಾಜಶೇಖರ್ ಹಿಟ್ನಾಳ್

**ಹಂಪಿ ಟೈಮ್ಸ್ ಕೊಪ್ಪಳ**

ನಮ್ಮ ಭಾಗದ ರೈತರ ಜೀವ ನಾಡಿಯಾದ ತುಂಗಭದ್ರಾ ಜಲಾಶಯದ ಸ್ಟೀಲ್ ವೇ ಗೇಟ್ ನಂ.19ರ ಕಾಮಗಾರಿಯು 2025ರ ಜುಲೈ ಮಾಹೆಯ ಅಂತ್ಯದೊಳಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ ಎಂದು ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ ಹೇಳಿದರು.

ಅವರು ಗುರುವಾರ ಕೊಪ್ಪಳ ಜಿಲ್ಲಾಡಳಿತ ಭವದಲ್ಲಿರುವ ಲೋಕಸಭಾ ಸದಸ್ಯರ ಕಛೇರಿಯಲ್ಲಿ ತುಂಗಭದ್ರಾ ಆಣೆಕಟ್ಟಿಗೆ ಹೊಸ ಸ್ಟೀಲ್‌ವೇ ಗೇಟುಗಳನ್ನು ಅಳವಡಿಸುವ ಕುರಿತು ಮಾಹಿತಿ ನೀಡಲು ಕರೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಕಳೆದ ವರ್ಷ ಕೊಚ್ಚಿ ಹೋಗಿದ್ದ ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ಸಂಖ್ಯೆ 19ಕ್ಕೆ ಸ್ಟಾಪ್ ಲಾಗ್ ಎಲಿಮೆಂಟ್‌ನ್ನು ಸರ್ಕಾರದ ಅಧಿಕಾರಿಗಳು ಹಾಗೂ ಗೇಟ್ ತಜ್ಞರಾದ ಕನ್ನಯ್ಯ ನಾಯ್ಡು ಮತ್ತು ಗೇಟ್ ತಯಾರಿಕಾ ಕಂಪನಿಗಳಾದ ಜಿಂದಾಲ್ ಸ್ಟೀಲ್ಸ್, ಹಿಂದೂಸ್ಥಾನಿ ಸ್ಟೀಲ್ಸ್ ಹಾಗೂ ನಾರಾಯಣ ಸ್ಟೀಲ್ಸ್ ಸಹಯೋಗದಲ್ಲಿ ಯಶಸ್ವಿಯಾಗಿ ಅಳವಡಿಸಲಾಯಿತು. ಇದಕ್ಕಾಗಿ ರಾಜ್ಯ ಸರ್ಕಾರವು ಬಹಳಷ್ಟು ಪ್ರಯತ್ನಗಳನ್ನು ಮಾಡಿತ್ತು. ಇದರಿಂದಾಗಿ ರೈತರ ಎರಡೂ ಬೆಳೆಗಳಿಗೆ ನೀರು ಕೊಡಲು ಅನುಕೂಲವಾಯಿತು ಎಂದರು.

ತುಂಗಭದ್ರಾ ಆಣೆಕಟ್ಟಿನ ಗೇಟ್‌ಗಳ ಸ್ಥಿತಿ–ಗತಿಗಳನ್ನು ಪರಿಶೀಲಿಸಿ ವರದಿ ಸಲ್ಲಿಸಲು ಕೇಂದ್ರ ಜಲ ಆಯೋಗವು (ಸಿ.ಡಬ್ಲ್ಯೂ.ಸಿ) ಒಂದು ಸಮಿತಿಯನ್ನು ರಚಿಸಿದ್ದು, ಸಿ.ಡಬ್ಲ್ಯೂ.ಸಿ.ಯ ನಿವೃತ್ತ ಅಧ್ಯಕ್ಷರಾದ ಎ.ಕೆ.ಬಜಾಜ್ ಅವರ ನೇತೃತ್ವದಲ್ಲಿ ತಾಂತ್ರಿಕ ಪರಿಣಿತರ ತಂಡವು 2025ರ ಏಪ್ರಿಲ್ 9ರಂದು ತುಂಗಭದ್ರಾ ಆಣೆಕಟ್ಟನ್ನು ಪರಿಶೀಲಿಸಿ, ಕಾಂಪ್ರೆನ್ಸಿವ್ ಹೆಲ್ತ್ ಓವರ್‌ವ್ಯೂವ್ (Comprehensive health overview) ಹಾಗೂ ಆಣೆಕಟ್ಟೆಯ ಸುರಕ್ಷತೆಯ ನಿರ್ವಹಣೆಯ ಬಗ್ಗೆ ಕೈಗೊಳ್ಳಬೇಕಾದ ಅಂಶಗಳ ವಿವರದ ವರದಿಯನ್ನು ನೀಡಿರುತ್ತಾರೆ. ಎನ್.ಡಿ.ಎಸ್.ಎ ಅಧ್ಯಕ್ಷರಾದ ಅನೀಲ್ ಜೈನ್ ಅವರು ತುಂಗಭದ್ರಾ ಆಣೆಕಟ್ಟನ್ನು ಪರಿಶೀಲಿಸಿ ಜಲಾಶಯದಲ್ಲಿ ಸಾಧ್ಯವಾದಷ್ಟು ಕಡಿಮೆ ಮಟ್ಟದಲ್ಲಿ ನೀರನ್ನು ಶೇಖರಿಸಲು ಹಾಗೂ ಆಣೆಕಟ್ಟಿನ ಕಾಂಪ್ರೆನ್ಸಿವ್ ಹೆಲ್ತ್‌ಚೆಕಪ್ (Comprehensive health checkup) ಕೈಗೊಳ್ಳಲು ಸಲಹೆ ನೀಡಿರುತ್ತಾರೆ ಎಂದು ಹೇಳಿದರು.

ಕೆ.ಎಸ್.ಎನ್.ಡಿ.ಟಿ ಸರ್ವಿಸಸ್ ರವರು ಡೆ ಪೆನೆಟ್ರೇಷನ್ ಟೆಸ್ಟ್, ಫೆಸ್ಡ್ ಅರೈವ್ ಅಲ್ಟ್ರಾಸೊನಿಕ್ ಟೆಸ್ಟ್ ಮತ್ತು ವಿಜ್ವಲ್ ಇನ್ಸ್‌ಫೆಕ್ಷನ್ (Dye penetration test, Phased array ultrasonic test and Visual inspection) ಪರೀಕ್ಷೆಗಳನ್ನು ಜಲಾಶಯದ ಎಲ್ಲಾ 32 ಗೇಟುಗಳ ಮೇಲೆ ಕೈಗೊಂಡು 2025ರ ಮಾರ್ಚ್ 25ರಂದು ವರದಿ ನೀಡಿರುತ್ತಾರೆ. ಈ



ವರದಿಯನ್ವಯ ಗೇಟುಗಳ ಬಹುತೇಕ ಭಾಗಗಳ ದಪ್ಪವು (ಥಿಕ್ನೆಸ್) ಮೂಲ ವಿನ್ಯಾಸಕ್ಕಿಂತ ಶೇಕಡಾ 40 ರಿಂದ 50 ರಷ್ಟು ಕಡಿಮೆಯಾಗಿರುವುದಾಗಿ ಹಾಗೂ ಎಲ್ಲಾ ಸ್ಟೀಲ್‌ವೇ ಗೇಟುಗಳನ್ನು ಬದಲಾಯಿಸ ಬೇಕಾಗುತ್ತದೆಂದು ತಿಳಿಸಿರುತ್ತಾರೆ. ಇದಲ್ಲದೇ ಆಂದ್ರಪ್ರದೇಶ ಸರ್ಕಾರದ ಸಲಹೆಗಾರರು ಹಾಗೂ ಗೇಟುಗಳ ತಜ್ಞರಾದ ಎನ್.ಕನ್ನಯ್ಯ ನಾಯ್ಡು ಅವರು ಏಪ್ರಿಲ್ 8 ಮತ್ತು 9 ರಂದು ಆಣೆಕಟ್ಟುಗಳ ಸ್ಟೀಲ್‌ವೇ ಗೇಟುಗಳನ್ನು



ಪರಿಶೀಲಿಸಿ ಎಂಡ್ ಕನೆಕ್ಷನ್‌ಗಳನ್ನು ಸದೃಡ (Strengthen) ಮಾಡಲು ಸಲಹೆ ನೀಡಿರುತ್ತಾರೆ. ಸ್ಟ್ರೆನಥೆನಿಂಗ್ ಆಫ್ ಗ್ರೀಡರ್ಸ್ ಟು ಎಂಡ್ ಬಾಕ್ಸ್ (Strengthening of girders to end box) ಕಾಮಗಾರಿ ಪ್ರಗತಿಯಲ್ಲಿರುತ್ತದೆ. ಎನ್.ಡಿ.ಟಿ ವರದಿಯನ್ವಯ 2025–26ನೇ ಸಾಲಿನಲ್ಲಿ ಗೇಟುಗಳನ್ನು ಫುಲ್ ಲೋಡಿಂಗ್ (full loading) ಮಾಡಲು ಸಾಧ್ಯವಾಗದೇ ಇರುವುದರಿಂದ ಒಂದು ಬೆಳೆಗೆ ಹಾಗೂ ಕುಡಿಯುವ ನೀರನ್ನು ಪರಿಗಣಿಸಿ ಸಿಲ್ ಲೇವಲ್ (Sill level) ಮೇಲೆ 12 ರಿಂದ 15 ಅಡಿಯವರೆಗೆ ಮಾತ್ರ ನೀರನ್ನು ಶೇಖರಿಸಲು ಸಲಹೆ ನೀಡಿರುತ್ತಾರೆ ಎಂದರು.

ಎನ್.ಕನ್ನಯ್ಯ ನಾಯ್ಡು ಇವರ ಸಲಹೆಯಂತೆ ಆಣೆಕಟ್ಟೆಯ ಗೇಟುಗಳ ಸುರಕ್ಷತೆಯ ಹಿನ್ನಲೆಯಲ್ಲಿ 2025–26ನೇ ಸಾಲಿನ ಜಲಾಶಯದಲ್ಲಿ 1626.06 ಅಡಿಯವರೆಗೆ ಸಾಮರ್ಥ್ಯವನ್ನು 80 ಟಿ.ಎಂ.ಸಿ.ಗೆ ನಿಬರ್ಂಧಿಸಿ ನೀರನ್ನು ಸಂಗ್ರಹಿಸಬೇಕಾಗುತ್ತದೆ. ಈ ವಿಷಯದ ಬಗ್ಗೆ ತುಂಗಭದ್ರಾ ಮಂಡಳಿಯು ರಾಜ್ಯಗಳ ಅಭಿಪ್ರಾಯ ಪಡೆದು ಕ್ರಮ ಕೈಗೊಳ್ಳಬೇಕಾಗಿರುತ್ತದೆ ಎಂದು ಹೇಳಿದರು.

ಸ್ಟೀಲ್ವೇ ಗೇಟ್ ನಂ.19ರ ಸ್ಟಾಪ್ ಲಾಗ್ ಗೇಟ್ ಎಲಿಮೆಂಟ್ಸ್ (Stop log gate elements) ಗಳ ತೆಗೆಯುವುದು ಹಾಗೂ ಹೊಸ ಸ್ಟೀಲ್ವೇ ಗೇಟುಗಳನ್ನು ಅಳವಡಿಸುವ ಕಾಮಗಾರಿಯನ್ನು ರೂ.1.66 ಕೋಟಿಗಳಿಗೆ (ಜಿ.ಎಸ್.ಟಿ. ಹೊರತುಪಡಿಸಿ) ಎಂ/ಎಸ್ ಹಾರ್ಡ್‌ವೇರ್ ಟೂಲ್ಸ್ & ಮಷಿನರಿ ಪ್ರೈ.ಲಿ ಅಹಮದಾಬಾದ್, ಗುಜರಾತ್ ಇವರಿಗೆ ವಹಿಸಲಾಗಿದೆ. ಕಾಮಗಾರಿಯನ್ನು ಜುಲೈ–2025 ರೊಳಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ. ಪ್ರಸ್ತುತ ಬಾಕಿ ಉಳಿದ 32 ಸ್ಟೀಲ್ವೇ ಗೇಟುಗಳನ್ನು ತೆಗೆದು ಹೊಸ ಸ್ಟೀಲ್ವೇ ಗೇಟುಗಳನ್ನು ಅಳವಡಿಸುವ ಕಾಮಗಾರಿಗಳಿಗೆ ರೂ.52 ಕೋಟಿ ಮೊತ್ತದ ಟೆಂಡರ್ ಕರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿರುತ್ತದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಸಂಸದರ ಆಪ್ತ ಸಹಾಯಕರಾದ ಅರಣು, ವೀರಭದ್ರಪ್ಪ ನಾಯಕ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಡಾ. ಸುರೇಶ್ ಜಿ. ಸೇರಿದಂತೆ ವಿವಿಧ ಮಾಧ್ಯಮ ಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ತೋಟಗಾರಿಕೆ ರೈತರಿಗೆ ಸಹಾಯ ಧನ : ಅರ್ಜಿ ಅಹ್ವಾನ

**ಹಂಪಿ ಟೈಮ್ಸ್ ಹೊಸಪೇಟೆ**

2025–26ನೇ ಸಾಲಿನ ಕೂಡ್ಲಿಗಿ ತಾಲೂಕಿನ ತೋಟಗಾರಿಕೆ ಇಲಾಖೆ ವತಿಯಿಂದ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆ, ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ (ಹನಿ ನೀರಾವರಿ), ಮತ್ತು ವಿವಿಧ ಯೋಜನೆಗಳಡಿಯಲ್ಲಿ ಅರ್ಹ ಫಲಾನುಭವಿಗಳ ಆಯ್ಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿಯಲ್ಲಿ ಅಂಗಾಂಶ ಬಾಳೆ, ದಾಳಿಂಬೆ, ಪಪ್ಪಯಾ, ಡ್ರಾಗನ್ ಹಣ್ಣು ಪ್ರದೇಶ ವಿಸ್ತರಣೆ, ತೋಟಗಾರಿಕೆ ಬೆಳೆಗಳಲ್ಲಿ ಪ್ಲಾಸ್ಟಿಕ್ ಹೊದಿಕೆ, ಕೋಲ್ಡ್ ಸ್ಟೋರೆಜ್, ಮಿನಿ ಟ್ರಾಕ್ಟರ್(20 ಹೆಚ್‌ಪಿ ಒಳಗೆ) ಮತ್ತು ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಅಳವಡಿಸಲು ಶೇ.90 ಸಹಾಯ ಧನ, ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ದಾಳಿಂಬೆ, ಡ್ರಾಗನ್ ಹಣ್ಣು ಪ್ರದೇಶ ವಿಸ್ತರಣೆ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಬಹು ವಾರ್ಷಿಕ ತೋಟಗಾರಿಕೆ ಬೆಳೆಗಳ ಪ್ರದೇಶ ವಿಸ್ತರಣೆ ದಾಳಿಂಬೆ, ಸೀಬೆ, ತೆಂಗು, ಅಂಗಾಂಶ ಬಾಳೆ, ಪಪ್ಪಾಯ, ನುಗ್ಗೆ, ಗುಲಾಬಿ ಈ ಯೋಜನೆಗಳಿಗೆ ಕೂಡಲೇ ತೋಟಗಾರಿಕೆ ಇಲಾಖೆ ಕೂಡ್ಲಿಗಿ ಸಂಪರ್ಕಿಸಿ ಅರ್ಜಿ ಸಲ್ಲಿಸಿ ನಿಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ರೈತರು ಆಯಾ ಹೋಬಳಿಯ ತೋಟಗಾರಿಕೆ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ. ಸಹಾಯಕ ತೋಟಗಾರಿಕೆ ಅಧಿಕಾರಿ, ರೈತ ಸಂಪರ್ಕ ಕೇಂದ್ರ ಕೂಡ್ಲಿಗಿ, ಹೊಸಹಳ್ಳಿ, ಗುಡೇಕೋಟೆ, ಕೊಟ್ಟೂರು ಮತ್ತು ಸಹಾಯಕ ತೋಟಗಾರಿಕೆ ನಿರ್ದೇಶಕರು ಕೂಡ್ಲಿಗಿ, ಹಿರಿಯ ಸಹಾಯಕ ತೋಟಗಾರಿಗೆ ನಿರ್ದೇಶಕರು(ಜಿ.ಪಂ) ಕಚೇರಿಗೆ ಭೇಟಿ ನೀಡಿ ಸಂಪರ್ಕಿಸಬಹುದು ಎಂದು ಕೂಡ್ಲಿಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅತಿಥಿ ಶಿಕ್ಷಕರು, ಉಪನ್ಯಾಸಕರ ಹುದ್ದೆಗೆ ಜೂ.1 ರಂದು ಸಾಮಾನ್ಯ ಪ್ರವೇಶ ಪರೀಕ್ಷೆ.

**ಹಂಪಿ ಟೈಮ್ಸ್ ಹೊಸಪೇಟೆ**

2025–26ನೇ ಶೈಕ್ಷಣಿಕ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಖಾಲಿಯಿರುವ ಅತಿಥಿ ಶಿಕ್ಷಕರು, ಉಪನ್ಯಾಸಕರ ಹುದ್ದೆಗಳಿಗೆ ತಾತ್ಕಾಲಿಕವಾಗಿ ಆಯ್ಕೆ ಮಾಡಲು ಜೂ.1 ರಂದು ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಕಾಲೇಜು ಮತ್ತು ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಅತಿಥಿ ಶಿಕ್ಷಕರು, ಉಪನ್ಯಾಸಕರನ್ನು ತಾತ್ಕಾಲಿಕವಾಗಿ ಆಯ್ಕೆ ಮಾಡಲು ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಜೂ.1 ರಂದು ಭಾನುವಾರ, ಬೆ.11 ರಿಂದ 1 ಗಂಟೆಯವರೆಗೆ ನಗರದ ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜು, ವಿಜಯನಗರ ಕಾಲೇಜು ರಸ್ತೆ, ಅಮರಾವತಿ, ಹೊಸಪೇಟೆ ಕಾಲೇಜಿನಲ್ಲಿ ಪ್ರವೇಶ ಪರೀಕ್ಷೆಗಳನ್ನು ನಿಗಧಿಪಡಿಸಲಾಗಿದೆ.

ನಿಗಧಿತ ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಜಿಲ್ಲಾ ಕಚೇರಿಗೆ ಭೇಟಿ ನೀಡಿ ಪರೀಕ್ಷೆಯ ಪ್ರವೇಶ ಪತ್ರವನ್ನು ಪಡೆಯಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಜಿಲ್ಲಾ ಅಧಿಕಾರಿಗಳ ಕಾರ್ಯಾಲಯ, ಎಸ್‌ಎಂಎಸ್‌ಕೆ ಪ್ಲಾಜಾ, ಅಂಬೇಡ್ಕರ್ ಸರ್ಕಲ್ ಹತ್ತಿರ. ಹೊಸಪೇಟೆ. ದೂ.08394–200206 ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

14 ಭಾಷೆಗಳಲ್ಲಿ
ಹಂಪಿ ಟೈಮ್ಸ್ ವೆಬ್‌ನ್ಯೂಸ್‌ಗೆ ಭೇಟಿ ನೀಡಿ, ನಿಮ್ಮ ಮಾತೃಭಾಷೆಯಲ್ಲಿ ಸುದ್ದಿ, ಲೇಖನ ಓದಿರಿ...
www.hampitimes.com

For Advertisement contact
M: 9448633038,
E-mail: hampitimes@gmail.com

### AFFIDAVIT

I, **BILICHODA SETRA SAVITHRI W/o Late Kobbajji Eshappa,** 73 years, Resident at Morigeri Village in Hagaribommanahalli Tq, Vijayanagara Dist.

My name has mentioned in Passport as Bilichoda Setra Savithri W/o Late Kobbajji Eshappa. in my Adhar Card as SAVITHRI K W/o Late Kobbajji Eshappa. I continue my name in future as **BILICHODA SETRA SAVITHRI W/o Late Kobbajji Eshappa.** vide affidavit sworn before notary P.Chatrappa, H.B.Halli, dtd on 26.05.2025

### ಹೊಸಪೇಟೆ ನಗರಾಭಿವೃದ್ಧಿ ಪ್ರಾಧಿಕಾರ, ಹೊಸಪೇಟೆ.

ಐ.ಎಸ್.ಆರ್‌ರಸ್ತೆ, ಚಿತ್ತವಾಡ್ಗಿ, ಹೊಸಪೇಟೆ–583201
ದೂರವಾಣಿ ಸಂಖ್ಯೆ:08394–227749
E-mail:hospethuda@gmail.com

ಸಂಖ್ಯೆ:ಹೊನಅಪ್ರಾ/ಎ1/ಭೂಉಬ07/2025–26 ದಿನಾಂಕ: 28.05.2025.

**:ಸಾರ್ವಜನಿಕ ಪ್ರಕಟಣೆ:**

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 14ಎ ರಡಿಯಲ್ಲಿ)

ಈ ಮೂಲಕ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, ಹೊಸಪೇಟೆ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಹೊಸಪೇಟೆ ತಾ: 88ಮುದ್ಲಾಪುರ ಗ್ರಾಮದ ಸ.ನಂ.3/1 ರಲ್ಲಿ 1.12.50 ಎಕರೆ, ಜಮೀನನ್ನು ಭೂಮಾಲೀಕರಾದ ಶ್ರೀ.ಪ್ರಭುಲಿಂಗಶ್ವೇರ ಕಪ್ಪಿ ಹೊಸಪೇಟೆ ಇವರು ವಸತಿ ಉದ್ದೇಶಕ್ಕೆ ಭೂಉಪಯೋಗ ಬದಲಾವಣೆ ಮಾಡಲು ಕೋರಿರುತ್ತಾರೆ.

ಪ್ರಸ್ತಾಪಿತ ಜಮೀನು ಅನುಮೋದಿತ ಮಹಾಯೋಜನೆ(ಪ–1)ರಲ್ಲಿ ಕೃಷಿ ವಲಯದಲ್ಲಿ ಬರುತ್ತದೆ. ಹಾಲಿ ಕಾಳುವೆ ಸೇವಾ ರಸ್ತೆಯಿಂದ ಸಂಪರ್ಕ ಇರುತ್ತದೆ. ಪ್ರಸ್ತಾಪಿತ ಜಮೀನನ್ನು ವಸತಿ ಉದ್ದೇಶಕ್ಕೆ ಭೂಉಪಯೋಗ ಬದಲಾವಣೆ ಮಾಡಿ, ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಿ, ಕೈಗೆಟುಕುವ ದರದಲ್ಲಿ ನಿವೇಶನಗಳನ್ನು ಮಾರಾಟ ಮಾಡಲಾಗುವುದು ಎಂದು ಸಾರ್ವಜನಿಕ ಹಿತಾಸಕ್ತಿ ಅರ್ಜಿದಾರರು ತಿಳಿಸಿರುತ್ತಾರೆ.

ಕಾರಣ ಪ್ರಸ್ತಾಪಿತ ಜಮೀನನ್ನು ಕೃಷಿ ವಲಯದಿಂದ ವಸತಿ ಉದ್ದೇಶಕ್ಕೆ ಹೊಸ ಭೂಉಪಯೋಗ ನಿಗಧಿ ಪಡಿಸಲು ಸಾರ್ವಜನಿಕರ ಸಲಹೆ/ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಈ ಪ್ರಕಟಣೆಯ ದಿನಾಂಕದಿಂದ 15 ದಿನಗಳೊಳಗಾಗಿ ಆಯುಕ್ತರು ನಗರಾಭಿವೃದ್ಧಿ ಪ್ರಾಧಿಕಾರ ಹೊಸಪೇಟೆ ಇವರಿಗೆ ಲಿಖಿತ ಆಕ್ಷೇಪಣೆ/ಸಲಹೆಗಳನ್ನು ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಮೂಲಕ ಸಲ್ಲಿಸುವಂತೆ ತಿಳಿಸಲಾಗಿದೆ. ಅವಧಿಯ ನಂತರ ಬಂದ ಆಕ್ಷೇಪಣೆ/ಸಲಹೆಗಳನ್ನು ಪರಿಗಣಿಸಲಾಗುವುದಿಲ್ಲ.

ಸಹಿ/– ಆಯುಕ್ತರು, ಹೊಸಪೇಟೆ ನಗರಾಭಿವೃದ್ಧಿ ಪ್ರಾಧಿಕಾರ, ಹೊಸಪೇಟೆ.

ವಾ.ಸಾ.ಸಂ.ಇ/ವಿಜಯನಗರ/2025–26/ಕೆಎಸ್‌ಎಂಸಿಎ/ಆರ್.ಓ.ಸಂಖ್ಯೆ/75



## ತುಂಗಭದ್ರಾ ನೀರಿನ ಮಟ್ಟ

ಗುರುವಾರ : 29-05-2025

| | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1591.50 ಅಡಿ |
| ಒಳ ಹರಿವು | 7799 ಕ್ಯುಸೆಕ್ |
| ಹೊರ ಹರಿವು | 188 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 12.333 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |
| ಕಳೆದ ವರ್ಷ ಇದೇ ದಿನ | |
| ಇಂದಿನ ಮಟ್ಟ | 1577.40 ಅಡಿ |
| ಒಳ ಹರಿವು | 0 ಕ್ಯುಸೆಕ್ |
| ಹೊರ ಹರಿವು | 45 ಕ್ಯುಸೆಕ್ |
| ಸಾಮರ್ಥ್ಯ | 3.338 ಟಿಎಂಸಿ |

## ನಿತ್ಯ ಪಂಚಾಂಗ

ಮಾಸ: ವೈಶಾಖ । ಸಂವತ್ಸರ: ವಿಶ್ವಾವಸು

30-05-2025 – ಶುಕ್ರವಾರ

| | |
|---|---|
| ತಿಥಿ | : ಚತುರ್ಥಿ |
| ಪಕ್ಷ | : ಶುಕ್ಲ |
| ನಕ್ಷತ್ರ | : ಪುನರ್ವಸು |
| ಯೋಗ | : ಗಂಡ |
| ಕರಣ | : ವಾಣಿಜ |
| ಸೂರ್ಯೋದಯ | : 05:42:27 |
| ಸೂರ್ಯಾಸ್ತ | : 19:06:46 |
| ರಾಹು ಕಾಲ | : 10:44-12:25 |
| ಯಮಘಂಡ ಕಾಲ | : 15:46-17:26 |
| ಗುಳಿಕ ಕಾಲ | : 07:23-09:04 |

ಮೈಮೇಲೆ ಹರಿದ ಬಟ್ಟೆ
ಇದ್ದರೂ ಚಿಂತೆಯಿಲ್ಲ.
ಕೈಯಲ್ಲೊಂದು
ಕನ್ನಡ ದಿನಪತ್ರಿಕೆ ಇರಲಿ.
ಡಿ..ವಿ.ಜಿ.

ಹಂಪಿ ಟೈಮ್ಸ್
ವಿಜಯನಗರದ ಹೆಮ್ಮೆ
ಕನ್ನಡ ದಿನ ಪತ್ರಿಕೆ
ವಿಜಯನಗರ ಜಿಲ್ಲೆಯ ಸಮಗ್ರ ಸುದ್ದಿ, ವಿಜ್ಞಾನ, ವಿಶೇಷ ಲೇಖನಗಳನ್ನು ಓದಲಿಚ್ಛಿಸುವವರು ಈ ಕೆಳಗಿನ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ, ವಾಟ್ಸಪ್ ಗ್ರೂಪಿಗೆ ಜಾಯಿನ್ ಆಗಿ ಹಂಪಿ ಟೈಮ್ಸ್ ಇ-ಪತ್ರಿಕೆ ಓದಿರಿ.
Only Admins can Send Messages to this Group
Join with Us

# ಹೆದ್ದಾರಿಯಲ್ಲಿ ಅಪಘಾತ ತಡೆಯಲು ಸರ್ವೀಸ್ ರಸ್ತೆ ನಿರ್ಮಾಣ ಶೀಘ್ರ

## ಸಂಸದ ಈ. ತುಕಾರಾಂ ಹೇಳಿಕೆ | ಸಂತೆಯಲ್ಲಿ ಇಂದಿರಾ ಕ್ಯಾಂಟೀನ್ ಉದ್ಘಾಟನೆ

**ಹಂಪಿ ಟೈಮ್ಸ್ ಮರಿಯಮ್ಮನಹಳ್ಳಿ**

ಬಹುದಿನಗಳ ಬೇಡಿಕೆಯಾಗಿದ್ದ ಡಣಾಪುರಣ ಬಳಿ ರಾಷ್ಟ್ರೀಯ ಹೆದ್ದಾರಿ 50 ರಸ್ತೆಯ ಫ್ಲೈಓವರ್ ಸೇತುವೆ ಮತ್ತು ಸರ್ವೀಸ್ ರಸ್ತೆ ಸೇರಿದಂತೆ ಇತರೆ ಕಾಮಗಾರಿಗೆ ಮುಂದಿನ ತಿಂಗಳಲ್ಲಿ ಭೂಮಿ ಪೂಜೆ ನೆರವೇರಿಸಲಾಗುವುದು ಎಂದು ಸಂಸದ ಈ. ತುಕಾರಾಂ ಹೇಳಿದರು.
ಅವರು ಪಟ್ಟಣದಲ್ಲಿ ಸಂತೆ ಮಾರುಕಟ್ಟೆಯಲ್ಲಿ ಗುರುವಾರ ಇಂದಿರಾ ಕ್ಯಾಂಟಿನ್ ಉದ್ಘಾಟಿಸಿ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.



ಡಣಾಪುರ ಬಳಿ ಇರುವ ರಾಷ್ಟ್ರೀಯ ಹೆದ್ದಾರಿ 50 ರಸ್ತೆಯಲ್ಲಿ ಅನೇಕ ಅಪಘಾತಗಳು ಸಂಭವಿಸುತ್ತಿದ್ದವು. ಅಪಘಾತಗಳನ್ನು ತಡೆಯಲು ಹಾಗೂ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಸುಮಾರು 54 ಕೋಟಿ ರು.ಗಳ ವೆಚ್ಚದಲ್ಲಿ ಸರ್ವೀಸ್ ರಸ್ತೆ, ವೇ ಬ್ರಿಡ್ಜ ಸೇರಿದಂತೆ ಇತರೆ ಅಭಿವೃದ್ಧಿ ಕೆಲಸಗಳನ್ನು ನಿರ್ಮಿಸಲಾಗುವುದು ಎಂದು ಅವರು ಹೇಳಿದರು.
ಮರಿಯಮ್ಮನಹಳ್ಳಿ ರೈಲ್ವೆ ನಿಲ್ದಾಣವನ್ನು ಮುಂದಿನ ದಿನಗಳಲ್ಲಿ ಅಭಿವೃದ್ಧಿ ರೈಲ್ವೆ ನಿಲ್ದಾಣವನ್ನಾಗಿ ಅಭಿವೃದ್ಧಿ ಪಡಿಸಲಾಗುವುದು. ಕೂಡ್ಲಿಗಿ ರಸ್ತೆಯ ರೈಲ್ವೆ ಗೇಟ್‌ನಲ್ಲಿ ಬಹಷ್ಟು ಟ್ರಾಫಿಕ್ ಜಾಮ್ ಉಂಟಾಗುತ್ತಿರುವ ಬಗ್ಗೆ ಸ್ಥಳೀಯರಿಂದ ದೂರುಗಳು ಕೇಳಿ ಬಂದಿವೆ. ಮುಂದಿನ ದಿನಗಳಲ್ಲಿ ರೈಲ್ವೆ ಗೇಟ್ ರಸ್ತೆಯನ್ನು ಅಗಲೀಕರಣಗೊಳಿಸಿ ರಸ್ತೆ ಅಭಿವೃದ್ಧಿ ಪಡಿಸಲಾಗುವುದು ಎಂದು ಅವರು ಹೇಳಿದರು. ಮರಿಯಮ್ಮನಹಳ್ಳಿ ಬಸ್ ನಿಲ್ದಾಣದಲ್ಲಿ ಆಟೋ ನಿಲ್ದಾಣ ಇಲ್ಲದೇ ರಸ್ತೆಯಲ್ಲೇ ಆಟೋಗಳು ನಿಲ್ಲಿಸಲಾಗುತ್ತಿರುವುದುರಿಂದ ಆಟೋ ಚಾಲಕರು ಉತ್ತಮ ಆಟೋ ನಿಲ್ದಾಣವನ್ನು ನಿರ್ಮಿಸಿ ಕೊಡುವಂತೆ ಮನವಿ ಮಾಡಿಕೊಂಡಿದ್ದು, ತಕ್ಷಣವೇ ಪೊಲೀಸ್ ಅಧಿಕಾರಿಗಳು ಮತ್ತು ಸ್ಥಳೀಯ ಪಟ್ಟಣ ಪಂಚಾಯಿತಿ ಅಧಿಕಾರಿಗಳು ನಿಲ್ದಾಣ ನಿರ್ಮಿಸುವ ಕುರಿತು ಆಂದಾಜು ವೆಚ್ಚ ಸಿದ್ದಪಡಿಸಿಕೊಟ್ಟರೆ ಸಂಸದರ ಅನುದಾನದಲ್ಲಿ ಆಟೋ ನಿಲ್ದಾಣವನ್ನು ತಕ್ಷಣವೇ ನಿರ್ಮಿಸಿ ಕೊಡುವೆ ಎಂದು ಹೇಳಿದರು.
ಕೂಡ್ಲಿಗಿ ತಾಲೂಕಿನ ಅಮ್ಮನಕೆರೆಯ ರಾಷ್ಟೀಯ ಹೆದ್ದಾರಿಯ ವೇಬ್ರಿಡ್ಜ್, ಸರ್ವೀಸ್ ರಸ್ತೆ, ಅಂಡರ್ ಪಾಸ್ ಮುಂಜೂರಾಗಿದೆ. ಅಲ್ಲದೇ ಅಲ್ಲಲ್ಲಿ ಸಣ್ಣಪುಟ್ಟ ಗ್ರಾಮಗಳ ಹತ್ತಿರ ಸರ್ವೀಸ್ ರಸ್ತೆಗಳನ್ನು ಜನರಿಗೆ ಅನುಕೂಲವಾಗುವಂತೆ ಮುಂದಿನ ದಿನಗಳಲ್ಲಿ ನಿರ್ಮಿಸಿಕೊಡಲಾಗುವುದು ಎಂದು ಅವರು ಹೇಳಿದರು.
ಸರ್ಕಾರದ ಆದೇಶದಂತೆ ಮೇ 30 ರೊಳಗಾಗಿ ಇಂದಿರಾ ಕ್ಯಾಂಟಿನ್ ಉದ್ಘಾಟನೆ ಮಾಡಬೇಕೆಂದು ಆದೇಶಿಸಿತ್ತು, ಆದ್ದರಿಂದ ಶಾಸಕರು, ಪಟ್ಟಣ ಪಂಚಾಯಿತಿ ಅಧ್ಯಕ್ಷರು, ಹಾಗೂ ಸರ್ವ ಸದಸ್ಯರ ಸಮ್ಮುಖದಲ್ಲಿ ಇಂದು ಇಂದಿರಾ ಕ್ಯಾಂಟಿನ್ ಚಾಲನೆ ನೀಡಲಾಗಿದೆ. ಬಡಜನರಿಗೆ, ಸಾಮಾನ್ಯರಿಗೆ, ವಿದ್ಯಾರ್ಥಿಗಳು, ಕೂಲಿ, ಕಾರ್ಮಿಕರಿಗೆ, ಕಡಿಮೆ ದರದಲ್ಲಿ ಹಸಿವು ನೀಗಿಸಲು ಇಂದಿರಾ ಕ್ಯಾಂಟೀನ್ ಸಹಾಯಕವಾಗಲಿದೆ.ಇದನ್ನು ಸಾರ್ವಜನಿಕರು ಸದುಪಯೋಗಪಡಿಸಕೊಳ್ಳ ಬೇಕು ಎಂದರು.
ಹಗರಿಬೊಮ್ಮನಹಳ್ಳಿ ಕ್ಷೇತ್ರದ ಶಾಸಕ ಕೆ. ನೇಮಿರಾಜ್ ನಾಯ್ಕ್, ಪ.ಪಂ.ಅಧ್ಯಕ್ಷ ಆದಿಮನಿ ಹುಸೇನ್ ಬಾಷಾ, ಉಪಾಧ್ಯಕ್ಷೆ ಲಕ್ಷ್ಮೀ ರೋಗಾಣಿ ಮಂಜುನಾಥ, ಸ್ಥಾಯಿ ಸಮಿತಿ ಅಧ್ಯಕ್ಷೆ ಹುಲಿಗಿಬಾಯಿ, ಪ.ಪಂ. ಮುಖ್ಯಾಧಿಕಾರಿ ಡಿ.ಜಿ. ಈರಣ್ಣ, ಪ.ಪಂ. ಸದಸ್ಯರು, ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

# ಕುವೆಂಪು ರಚನೆ ಸಾಹಿತ್ಯದಲ್ಲಿ ಸರ್ವೋದಯ ತತ್ವ ಅಡಗಿದೆ

**ಹಂಪಿ ಟೈಮ್ಸ್ ಬಳ್ಳಾರಿ**

ಕುವೆಂಪು ರಚಿಸಿದ ಸಾಹಿತ್ಯದ ಎಲ್ಲಾ ಪ್ರಕಾರಗಳಲ್ಲಿ ಸರ್ವೋದಯ ತತ್ವವಿದೆ. ಪ್ರಜಾಪ್ರಭುತ್ವ ಮೌಲ್ಯಗಳನ್ನು ಎತ್ತಿ ಹಿಡಿಯುವದರ ಮೂಲಕ ಸಮನ್ವಯ ಮತ್ತು ಪೂರ್ಣದೃಷ್ಠಿಯ ಹರಿಕಾರರಾಗಿದ್ದಾರೆ. ಅವರ ವೈಚಾರಿಕತೆ ಮತ್ತು ವೈಜ್ಞಾನಿಕ ದೃಷ್ಠಿಕೋನವನ್ನು ಎಲ್ಲರೂ ಅನುಸರಿಸಬೇಕು ಎಂದು ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಸಿ. ಕೊಟ್ರೇಶ ಹೇಳಿದರು.
ಇಲ್ಲಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಬಳ್ಳಾರಿ ಜಿಲ್ಲಾ ಘಟಕ ಹಾಗೂ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಕನ್ನಡ



ಅಧ್ಯಯನ ವಿಭಾಗದ ಸಂಯುಕ್ತಾಶ್ರಯದಲ್ಲಿ 'ದಿ.ಕೆ.ವಿ.ತಿರುಪಾಲಪ್ಪ ಸ್ಮಾರಕ ದತ್ತಿ ಕಾರ್ಯಕ್ರಮ'ದಡಿ ಬುಧವಾರ ಏರ್ಪಡಿಸಿದ್ದ 'ಕುವೆಂಪು ಸಾಹಿತ್ಯದಲ್ಲಿ ವೈಚಾರಿಕತೆ' ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು. ವಿಜ್ಞಾನ ಮತ್ತು ಧರ್ಮವು ಕುವೆಂಪು ಅವರ ಸಾಹಿತ್ಯದ ವೈಚಾರಿಕತೆಯಾಗಿದೆ. ಮನುಜ ಮತ-ವಿಶ್ವ ಪಥ, ಸರ್ವೋದಯ ಪೂರ್ಣ ದೃಷ್ಟಿ ಸಮನ್ವಯತೆಯನ್ನು ಕುವೆಂಪು ಅವರ ಸಾಹಿತ್ಯದ ಮೂಲಕ ಕೊಟ್ಟ ನಿದರ್ಶನಗಳಾಗಿವೆ. ಇವುಗಳನ್ನು ಅರಗಿಸಿಕೊಂಡು ಬೆಳೆದಷ್ಟೂ ಕನ್ನಡ ಸಾಹಿತ್ಯವು ಇನ್ನು ಹೆಚ್ಚು ಶ್ರೀಮಂತವಾಗುತ್ತದೆ ಎಂದು ಹೇಳಿದರು.
ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷ ಡಾ.ನಿಷ್ಠಿ ರುದ್ರಪ್ಪ, ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎಂ.ಮುನಿರಾಜು ಮಾತನಾಡಿದರು. ಈ ಸಂದರ್ಭದಲ್ಲಿ ವಿ.ವಿ ಯ ಅಕಾಡೆಮಿಕ್ ಕೌನ್ಸಿಲ್‌ನ ಮಾಜಿ ಸದಸ್ಯ ವೆಂಕಟೇಶ ಹೆಗಡೆ, ವಿವಿಯ ಸಿಂಡಿಕೇಟ್ ಮಾಜಿ ಸದಸ್ಯ ಜಯಪ್ರಕಾಶ್ ಗೌಡ, ಕಲಾ ನಿಕಾಯದ ಡೀನರಾದ ಪ್ರೊ.ಎನ್ ಶಾಂತಾನಾಯ್ಕ್, ಇಂಗ್ಲೀಷ್ ವಿಭಾಗದ ಮುಖ್ಯಸ್ಥ ಪ್ರೊ.ರಾಬರ್ಟ ಜೋಷ್, ಕನ್ನಡ ವಿಭಾಗದ ಮುಖ್ಯಸ್ಥ ಡಾ.ಜಿ.ಕೆ.ಸಂತೋಷ್ ಇತರರು ಉಪಸ್ಥಿತರಿದ್ದರು.

# ಕೃಷ್ಣಾ ನದಿಯ ಒಳ ಹರಿವು ಹೆಚ್ಚಳ ನದಿಪಾತ್ರದ ಗ್ರಾಮಸ್ಥರಿಗೆ ಸೂಚನೆ

**ಹಂಪಿ ಟೈಮ್ಸ್ ರಾಯಚೂರು**

ಮುಂಗಾರು ಹಂಗಾಮಿನ 2025-26ನೇ ಸಾಲಿನಲ್ಲಿ ಮಹಾರಾಷ್ಟ ರಾಜ್ಯದಲ್ಲಿ ಜಾಸ್ತಿ ಮಳೆಯಾಗಿರುವುದರಿಂದ ಸೊನ್ನ ಬ್ಯಾರಜದಿಂದ ಭೀಮಾ ನದಿಗೆ ಭಾರಿ ಪ್ರಮಾಣದಲ್ಲಿ ನೀರು ಬಿಡುತ್ತಿರುವುದರಿಂದ ಕೃಷ್ಣಾ ನದಿಗೆ ಅತೀ ಹೆಚ್ಚಿನ ಪ್ರಮಾಣದಲ್ಲಿ ಒಳ ಹರಿವು ಹೆಚ್ಚಾಗಿದ್ದು, ರಾಯಚೂರು ತಾಲೂಕಿನ ಕೃಷ್ಣಾ ನದಿ ಪಾತ್ರದ ಗ್ರಾಮಗಳ ಸಾರ್ವಜನಿಕರು ಅಗತ್ಯ ಎಚ್ಚರ ವಹಿಸುವಂತೆ ರಾಯಚೂರು ತಹಶೀಲ್ದಾರ್ ಸುರೇಶ್ ವರ್ಮ ಅವರು ತಿಳಿಸಿದ್ದಾರೆ.
ಕೃಷ್ಣ ನದಿಗೆ ನೀರು ಬಿಡುವ ಸಾಧ್ಯತೆ ಹೆಚ್ಚಾಗಿರುವುದರಿಂದ ರಾಯಚೂರು ತಾಲೂಕಿನ ಕೃಷ್ಣಾ ನದಿ ಪಾತ್ರದ ಗ್ರಾಮಗಳಾದ ಬುರ್ದಿಪಾಡ, ಗುರ್ಜಾಪೂರು, ಕೊರ್ತಕುಂದಾ, ಕುರ್ವಕುಲಾ, ಅಗ್ರಹಾರ, ಕುರ್ವಕುರ್ದಾ, ಅತ್ತೂರು, ದೇವಸೂಗೂರು, ಗಂಜಳ್ಳಿ, ಕಾಡೂರು, ಕರೆಕಲ್, ಡಿ.ರಾಂಪೂರು, ಅರಷಣಗಿ, ಮಾಮಡದೊಡ್ಡಿ, ಮಂಗಿಗಡ್ಡ, ರಾಲದೊಡ್ಡಿ, ಕೊರ್ವಿಹಾಳ ಗ್ರಾಮಗಳ ಗ್ರಾಮಸ್ಥರು ಯಾವುದೇ ಕಾರಣಕ್ಕೂ ನದಿಯ ಪಾತ್ರಕ್ಕೆ ತೆರಳಬಾರದು. ಅಲ್ಲದೆ ಸಾವರ್ಜನಿಕರು ತಮ್ಮ ದನ-ಕರುಗಳನ್ನು ನದಿಗೆ ತೆರಳದಂತೆ ನೋಡಿಕೊಳ್ಳುವುದು. ರಭಸವಾಗಿ ಬರುವ ನೀರಿನ ಜೊತೆಗೆ ಮೊಸಳೆಗಳು ಬರುವುದರಿಂದ ಪ್ರಾಣ ಹಾನಿಯಾಗುವ ಸಾಧ್ಯತೆ ಇರುವುದರಿಂದ ಎಚ್ಚರ ವಹಿಸಬೇಕು.
ರೈತರು ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಅಳವಡಿಸಿರುವ ಪಂಪಸೆಟ್‌ಗಳನ್ನು ಯಾವುದೇ ಅಹಿತಕರ ಘಟನೆಗಳು ಜರಗದಂತೆ ನದಿ ಪಾತ್ರದಿಂದ ಹೊರತೆಗೆಯುವುದು. ರೈತರು ಯಾವುದೇ ಸಾವು-ನೋವುಗಳು ಸಂಭವಿಸದಂತೆ ಪ್ರವಾಹದ ಮುನ್ಸೂಚನೆಯಂತೆ ಕ್ರಮ ಕೈಗೊಳ್ಳಬೇಕು.
ಕೃಷ್ಣಾ ನದಿಪಾತ್ರದ ನಡುಗಡ್ಡೆಗಳಾದ ಕುರ್ವಕುರ್ದಾ ಮತ್ತು ನಾರಗಡ್ಡೆ ಗ್ರಾಮದ ಸಾರ್ವಜನಿಕರು ಪ್ರವಾಹದ ಸಂದರ್ಭದಲ್ಲಿ ರಸ್ತೆ ಸಂಪರ್ಕ, ದೂರವಾಣಿ ಸಂಪರ್ಕ ಕಡಿತಗೊಳ್ಳುವುದರಿಂದ ಜೀವಹಾನಿ, ಪ್ರಾಣಹಾನಿ ಆಗದಂತೆ ಮುಂಜಾಗ್ರತ ಕ್ರಮವಾಗಿ ಆಹಾರ, ಔಷಧಿ, ಸಾಮಗ್ರಿಗಳನ್ನು ಶೇಖರಣೆ ಮಾಡಿಕೊಳ್ಳಬೇಕು. ಹಾಗೂ ವಯೋವೃದ್ಧರು, ದೀರ್ಘ ಕಾಯಿಲೆಯಿಂದ ಬಳುತ್ತಿರುವವರು ವಯಸ್ಕರು ಮತ್ತು ಮಕ್ಕಳು, ಗರ್ಭಿಣಿಯರು ಸುರಕ್ಷಿತವಾದ ಸ್ಥಳಗಳಿಗೆ ತೆರಳಬೇಕು ಎಂದು ರಾಯಚೂರು ತಹಶೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಂಬಲ ಯೋಜನೆಯಡಿ ಸೂರ್ಯಕಾಂತಿ ಉತ್ಪನ್ನ ಖರೀದಿ

**ಹಂಪಿ ಟೈಮ್ಸ್ ಹೊಸಪೇಟೆ**

2024-25ನೇ ಸಾಲಿನ ಹಿಂಗಾರು ಹಂಗಾಮಿನ ಎಫ್‌ಎಕ್ಯೂ ಗುಣಮಟ್ಟದ ಸೂರ್ಯಕಾಂತಿ ಉತ್ಪನ್ನವನ್ನು ಕೇಂದ್ರ ಸರ್ಕಾರ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಪ್ರತಿ ಕ್ವಿಂಟಾಲ್‌ಗೆ ರೂ.7280 ರಂತೆ ರೈತರಿಂದ ಉತ್ಪನ್ನ ಖರೀದಿಗಾಗಿ ಮೊತ್ತವನ್ನು ನಿಗಧಿಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ತಿಳಿಸಿದ್ದಾರೆ.
ಜಿಲ್ಲೆಯಲ್ಲಿ ಇಟಗಿ, ನಂದಿಬೇವೂರು, ಹುರುಳಿಹಾಳು, ಉಪನಾಯಕನಹಳ್ಳಿ ಮತ್ತು ಕೋಗಳಿ ಕರ್ನಾಟಕ ಸಹಕಾರಿ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳಿ ನಿಯಮಿತ (ಕೆಓಎಫ್) ಅಡಿಯಲ್ಲಿ ಓಜಿಸಿಎಸ್ ಖರೀದಿ ಏಜೆನ್ಸಿ ಕೇಂದ್ರಗಳಿದ್ದು, ರೈತರು ತಾವು ಬೆಳೆದ ಸೂರ್ಯಕಾಂತಿಯನ್ನು ಅಗತ್ಯ ದಾಖಲಾತಿಗಳೊಂದಿಗೆ ಮೇ.16 ರಿಂದ 90 ದಿನಗಳವರೆಗೆ ಉತ್ಪನ್ನ ಖರೀದಿಸಲಾಗುವುದು. ಸೂರ್ಯಕಾಂತಿ ಖರೀದಿ ಕೇಂದ್ರಗಳಲ್ಲಿ ರೈತರು ತಮ್ಮ ಹೆಸರನ್ನು ಮೇ.16 ರಿಂದ 80 ದಿನಗಳೊಳಗೆ ನೋಂದಣಿ ಮಾಡಿಸಿ ಹಾಗೂ ನೋಂದಣಿ ಚೀಟಿಯನ್ನು ಪಡೆಯಬೇಕು. ರೈತರು ಮಧ್ಯವರ್ತಿಗಳ ಮೊರೆ ಹೋಗದೆ ಯೋಜನೆಯ ಸದುಪಯೋಗ ಪಡೆಯಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ.1 ಭಾನುವಾರ ಹೂವಿನಹಡಗಲಿ ಉಪನೋಂದಣಿ ಕಚೇರಿ ಕಾರ್ಯ

**ಹಂಪಿ ಟೈಮ್ಸ್ ಹೊಸಪೇಟೆ**

ಸರ್ಕಾರದ ಆದೇಶದಂತೆ ಜಿಲ್ಲೆಯ ಒಂದು ಉಪನೋಂದಣಿ ಕಚೇರಿ ಪ್ರತಿ ಭಾನುವಾರ, 2ನೇ ಶನಿವಾರ ಹಾಗೂ 4ನೇ ಶನಿವಾರ ರಜಾದಿನಗಳಂದು ಕಾರ್ಯನಿರ್ವಹಿಸುವಂತೆ ಸೂಚಿಸಲಾಗಿದೆ. ರಜಾ ದಿನಗಳಂದು ಕಾರ್ಯನಿರ್ವಹಿಸಿದ ಉಪ ನೋಂದಾಣಿ ಕಚೇರಿ ಮಂಗಳವಾರದಂದು ರಜೆ ಘೋಷಿಸಲಾಗಿರುತ್ತದೆ.
ಜಿಲ್ಲೆಯ ಐದು ಉಪ ನೋಂದಾಣಿ ಕಚೇರಿ ಪೈಕಿ ಹೂವಿನಹಡಗಲಿ ಉಪ ನೋಂದಾಣಿ ಕಚೇರಿ ಜೂ.1 ರಂದು ಭಾನುವಾರದಂದು ಕಾರ್ಯ ನಿರ್ವಹಿಸುತ್ತದೆ. ಹಾಗೂ ಜಿಲ್ಲೆಯ ಇತರೆ ಉಪ ನೋಂದಾಣಿ ಕಚೇರಿಗಳು ಕಾರ್ಯನಿರ್ವಹಿಸುವ ರಜಾದಿನಗಳ ದಿನಾಂಕವನ್ನು ಇಲಾಖೆಯ ಕಚೇರಿ ನೋಟಿಸ್ ಬೋರ್ಡ್‌ನಲ್ಲಿ ಪ್ರಕಟಿಸಲಾಗಿರುತ್ತದೆ. ರಜಾ ದಿನಗಳಂದು ಜಿಲ್ಲೆಯ ಎಲ್ಲಾ ತಾಲೂಕುಗಳ ಉಪ ನೋಂದಾಣಿ ಕಚೇರಿ ವ್ಯಾಪ್ತಿಯ ಸ್ವತ್ತುಗಳ ನೋಂದಾಣಿಯನ್ನು ಕಾರ್ಯನಿರ್ವಹಿಸುತ್ತಿರುವ ಕಚೇರಿಗಳಲ್ಲಿ ಮಾಡಲಾಗುವುದು. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ವಿಜಯನಗರ ಜಿಲ್ಲಾ ನೋಂದಾಣಾಧಿಕಾರಿಗಳಾದ ಸೈಯದ್ ಖಾದರ್ ಕೊಪ್ಪಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹುದ್ದೆಗಳಿಗೆ ಮೇ.31ಕ್ಕೆ ನೇರ ಸಂದರ್ಶನ

**ಹಂಪಿ ಟೈಮ್ಸ್ ರಾಯಚೂರು**

ಇಲ್ಲಿನ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ವಿನಿಮಯ ಇಲಾಖೆ ಕಚೇರಿಯಲ್ಲಿ ಮೇ 31ರ ಬೆಳಿಗ್ಗೆ 9 ರಿಂದ ಮಧ್ಯಾಹ್ನ 1.30 ಗಂಟೆವರೆಗೆ ನೇರ ಸಂದರ್ಶನ ಆಯೋಜನೆ ಮಾಡಿಲಾಗಿದ್ದು, ಆಸಕ್ತ ಯುವಕ ಅಥವಾ ಯುವತಿಯರು ಭಾಗಹಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ.
ನೇರ ಸಂದರ್ಶನವನ್ನು ಎರಡು ಖಾಸಗಿ ಸಂಸ್ಥೆಗಳ ಸಹಭಾಗಿತ್ವದಲ್ಲಿ ಆಯೋಜನೆ ಮಾಡಲಾಗಿದ್ದು, ತಮ್ಮ ಕಂಪನಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.
18 ರಿಂದ 30 ವರ್ಷಗಳವರೆಗಿನ ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕ ಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ಬಯೋಡಾಟಾ, ಆಧಾರ್ ಕಾರ್ಡ ಪ್ರತಿ ಹಾಗೂ ಭಾವಚಿತ್ರಗಳೊಂದಿಗೆ ಆಗಮಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಈ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ; 08532-231684,9008211750, 8095125775ಗೆ ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಂಪಿ ಟೈಮ್ಸ್
ವಿಜಯನಗರದ ಹೆಮ್ಮೆ
ಕನ್ನಡ ದಿನ ಪತ್ರಿಕೆ
HAMPI TIMES
Print & Digital Kannada Daily
ಪರಿಸರ ಬೆಳೆಸಿ ಮಕ್ಕಳ ಭವಿಷ್ಯಕ್ಕೆ ಬೆಳಕಾಗಿ
ಪರಿಸರ ಉಳಿಸಿ ಬೆಳೆಸೋಣ ಅಭಿಯಾನಕ್ಕೆ ಪಾಲಕರು ಕೈಜೋಡಿಸಿ, ಭವಿಷ್ಯದ ಮಕ್ಕಳಿಗೆ ಉತ್ತಮ ಆರೋಗ್ಯ ನೀಡಿ
ಶಾಲೆ ಪ್ರವೇಶಿಸುವ ನಿಮ್ಮ ಮಗುವಿನ ಹೆಸರಿನಲ್ಲೊಂದು ಸಸಿ ನೆಡಿಸಿ,
ಹಂಪಿ ಟೈಮ್ಸ್ ಗೆ ಫೋಟೋ ಕಳುಹಿಸಿ...

ನೂತನವಾಗಿ ಶಾಲೆ ಪ್ರವೇಶಿಸುತ್ತಿರುವ ಮಗುವಿನಿಂದ ಒಂದು ಸಸಿ ನೆಡಿಸಿ. ಆ ಸಸಿಗೆ ಆ ಮಗುವಿನ ಹೆಸರನ್ನೇ ನಾಮಕರಣ ಮಾಡಿ, ಆ ಮಧುರಕ್ಷಣವನ್ನು ಕ್ಯಾಮರಾದಲ್ಲಿ ಸೆರೆಹಿಡಿದು, ಮಗುವಿನ ಮತ್ತು ಸಸಿಯ ಹೆಸರು, ಶಾಲೆಯ ಹೆಸರು, ಊರು, ಜಿಲ್ಲೆ ನಮೂದಿಸಿ ಕಳುಹಿಸಿಕೊಡಿ.
ಆಯ್ದ ಫೋಟೋಗಳನ್ನು
ಹಂಪಿ ಟೈಮ್ಸ್‌ನಲ್ಲಿ ಪ್ರಕಟಿಸಲಾಗುವುದು.

SCAN & READ
HAMPI TIMES E-PAPER
ಫೋಟೋಗಳನ್ನು ಈ ಕೆಳಗಿನ ಇಮೇಲ್/ವಾಟ್ಸಪ್ ನಂಬರಿಗೆ ಸಸಿ ನೆಟ್ಟ ದಿನವೇ ಕಳುಹಿಸಿ
www.hampitimes.com / https://epaper.hampitimes.com
Email: hampitimes@gmail.com
Contact for Advertisement place : 94486 33038